ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI


ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 25 RNI Number : KNKAN/25/A2770 29-01-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :25 ರಾಯಚೂರು 29-01-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ವಿಮಾನ ಅಪಘಾತದಲ್ಲಿ ಅಜಿತ್ ಪವಾರ್ ಸಾವು: ಸಿಎಂ, ಡಿಸಿಎಂ ಸೇರಿ ಗಣ್ಯರ ಸಂತಾಪ



ಬೆಂಗಳೂರು,ಜ.28-

ಇಂದು ಬೆಳಗ್ಗೆ ಸಂಭವಿಸಿದ ವಿಮಾನ ಅಪಘಾತದಲ್ಲಿ ನಿಧನರಾದ ಮಹಾರಾಷ್ಟ್ರ ಡಿಸಿಎಂ ಅಜಿತ್ ಪವಾರ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಹಲವಾರು ರಾಜಕೀಯ ನಾಯಕರು ಸಂತಾಪ ಸೂಚಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ ಎಕ್ಸ್ ನಲ್ಲಿ ಪೋಸ್ಟ್ ಮಾಡಿ, ವಿಮಾನ ಅಪಘಾತದಲ್ಲಿ ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಶ್ರೀ ಅಜಿತ್ ಪವಾರ್ ಅವರ ದುರಂತ ನಿಧನದಿಂದ ತೀವ್ರ ದುಃಖಿತನಾಗಿದ್ದೇನೆ. ಅವರ ನಿಧನವು ಸಾರ್ವಜನಿಕ ಜೀವನಕ್ಕೆ ಅಪಾರ ನಷ್ಟವಾಗಿದೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ, ಪ್ರೀತಿಪಾತ್ರರಿಗೆ ಈ ನಷ್ಟವನ್ನು ಸಹಿಸಿಕೊಳ್ಳುವ ಶಕ್ತಿ ಸಿಗುವಂತಾಗಲಿ ಎಂದು ತಿಳಿಸಿದ್ದಾರೆ.

ಅಜಿತ್ ಪವಾರ್ ಅವರ ಅಕಾಲಿಕ ವಿಮಾನ ಅಪಘಾತದಿಂದ ಆಘಾತ ಮತ್ತು ತೀವ್ರ ದುಃಖವಾಗಿದೆ. ಅವರ ಹಠಾತ್ ನಿಧನವು ಸಾರ್ವಜನಿಕ ಜೀವನ ಮತ್ತು ಮಹಾರಾಷ್ಟ್ರ ರಾಜಕೀಯಕ್ಕೆ ದೊಡ್ಡ ನಷ್ಟವಾಗಿದೆ, ಅಲ್ಲಿ ಅವರು ಅನುಭವ ಮತ್ತು ದೃಢಸಂಕಲ್ಪದಿಂದ


3ನೇ ಪುಟಕ್ಕೆ

ನಗರ ಸ್ಥಳೀಯ ಸಂಸ್ಥೆ, ಗ್ರಾ.ಪಂ.ಗಳಿಗೆ ಮೀಸಲು ನಿಗದಿ: ಉತ್ತರಿಸಲು ಸರಕಾರಕ್ಕೆ ಕೊನೇ ಅವಕಾಶ ನೀಡಿದ ಹೈಕೋರ್ಟ್

ಬೆಂಗಳೂರು,ಜ.28-

ರಾಜ್ಯದಲ್ಲಿ ಗ್ರಾಮ ಪಂಚಾಯತಿಗಳ ಸದಸ್ಯ ಸ್ಥಾನಗಳಿಗೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಗೆ ವಾರ್ಡವಾರು ಮೀಸಲಾತಿ ನಿಗದಿಪಡಿಸುವ ಸಂಬಂಧ ಉತ್ತರಿಸಲು ರಾಜ್ಯ ಸರಕಾರಕ್ಕೆ ಹೈಕೋರ್ಟ್ ಅಂತಿಮ ಅವಕಾಶ ನೀಡಿದೆ.

ಚುನಾವಣೆಗಾಗಿ ಮೀಸಲಾತಿ ಅಧಿಸೂಚನೆ ಹೊರಡಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಸರಕಾರಕ್ಕೆ ನಿರ್ದೇಶಿಸುವಂತೆ ಕೋರಿ ರಾಜ್ಯ ಚುನಾವಣಾ ಆಯೋಗ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ಅವರಿದ್ದ ವಿಭಾಗೀಯ ನ್ಯಾಯಪೀಠ ಬುಧವಾರ ವಿಚಾರಣೆ ನಡೆಸಿತು.



ರಾಜ್ಯ ಚುನವಣಾ ಆಯೋಗದ ಪರ ಹಿರಿಯ ವಕೀಲ ಕೆ.ಎನ್. ಫಣೀಂದ್ರ, ವಾದ ಮಂಡಿಸಿ, ರಾಜ್ಯದ ಬಹುತೇಕ ಎಲ್ಲ ಗ್ರಾಮ ಪಂಚಾಯಿತಿಗಳ ಅವಧಿ ಈ ತಿಂಗಳ ಅಂತ್ಯದೊಳಗೆ ಪೂರ್ಣಗೊಳ್ಳಲಿದೆ. 187 ನಗರ ಸ್ಥಳೀಯ ಸಂಸ್ಥೆಗಳ ಅವಧಿ ಈಗಾಗಲೇ ಪೂರ್ಣಗೊಂಡಿದೆ. ಸಕಾಲದಲ್ಲಿ ಚುನಾವಣೆ ನಡೆಸಬೇಕೆಂಬ ಸಾಂವಿಧಾನಿಕ ನ್ಯಾಯಪೀಠದ ತೀರ್ಪಿಗೆ ಚುನಾವಣಾ ಆಯೋಗ ಬದ್ಧವಾಗಿದ್ದು, ಮೀಸಲಾತಿ ಅಧಿಸೂಚನೆ ಹೊರಡಿಸುವಂತೆ ಸರಕಾರಕ್ಕೆ ಹಲವು ಬಾರಿ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ. ಅದಕ್ಕಾಗಿಯೇ ಈ ಅರ್ಜಿ ಸಲ್ಲಿಸಲಾಗಿದೆ. ಅರ್ಜಿ ಸಂಬಂಧ ನವೆಂಬರ್ 12ರಂದೇ ನ್ಯಾಯಾಲಯ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಿದೆ ಎಂದು ತಿಳಿಸಿದರು.

ರಾಜ್ಯ ಸರಕಾರದ ಪರ ಹಾಜರಿದ್ದ ಹೆಚ್ಚುವರಿ ಸರಕಾರಿ ವಕೀಲೆ ನಿಲೋಫರ್ ಅಕ್ಬರ್ ಅವರು, ಮೀಸಲಾತಿ ಸಿದ್ಧಪಡಿಸುವ ಸಂಬಂಧ ಎಲ್ಲ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ನಿರ್ದೇಶನ ನೀಡಲಾಗಿದೆ. ಅರ್ಜಿ ವಿಚಾರಣೆಯನ್ನು ಅಲ್ಪಾವಧಿಗೆ ಮುಂದೂಡಬೇಕು ಎಂದು ನ್ಯಾಯಪೀಠಕ್ಕೆ ಮನವಿ ಮಾಡಿದರು.

ವಾದ ಮುಂದುವರಿಸಿದ ಫಣೀಂದ್ರ, ರಾಜ್ಯದಲ್ಲಿ ಸುಮಾರು 6 ಸಾವಿರ ಗ್ರಾಮ ಪಂಚಾಯಿತಿಗಳು ಹಾಗೂ 187 ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಬೇಕಿದೆ. ಅವಧಿ ಪೂರ್ಣಗೊಂಡಿರುವ ಎಲ್ಲ ನಗರ ಸ್ಥಳೀಯ ಸಂಸ್ಥೆಗಳಿಗೆ ಈಗಾಗಲೇ ಆಡಳಿತಾಧಿಕಾರಿ ನೇಮಕ ಮಾಡಲಾಗಿದೆ ಎಂದು ನ್ಯಾಯಪೀಠಕ್ಕೆ ತಿಳಿಸಿದರು.

ಅಂತಿಮವಾಗಿ, ಒಂದು ವಾರ ಕಾಲಾವಕಾಶ ನೀಡುವಂತೆ

3ನೇ ಪುಟಕ್ಕೆ

ವಾರ್ತಾ ಇಲಾಖೆಯ ಮಾಹಿತಿ ಪ್ರದರ್ಶನ ಮಳಿಗೆಗೆ ಚಾಲನೆ

ರಾಯಚೂರು,ಜ.28-

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗಾಗಿ ರಾಜ್ಯ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳ ಕುರಿತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ರೂಪಿಸಿರುವ ಮಾಹಿತಿ ಪ್ರದರ್ಶನ ಮಳಿಗೆಗೆ ರಾಯಚೂರು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಚಾಲನೆ ನೀಡಿದರು.



ಲಿಂಗಸೂರು ಕೇಂದ್ರ ಬಸ್ ನಿಲ್ದಾಣದಲ್ಲಿ ಜನವರಿ 28ರಂದು ನಡೆದ ಕಾರ್ಯಕ್ರಮದಲ್ಲಿ ರಿಬ್ಬನ್ ಕತ್ತರಿಸುವ ಮೂಲಕ ಮಳಿಗೆಯನ್ನು ಉದ್ಘಾಟಿಸಿದರು. ಇದೆ ವೇಳೆ, ಸಾಂಪ್ರದಾಯಿಕ ಮಾದರಿಯಲ್ಲಿ ಸಿದ್ಧಪಡಿಸಿದ್ದ ದೀಪ ಪ್ರಜ್ವಲನೆ ಕಾರ್ಯಕ್ರಮದಲ್ಲಿ ದೀಪ ಬೆಳಗಿಸಿ ಮಾತನಾಡಿದ ಪಾಮಯ್ಯ ಮುರಾರಿ ಅವರು, ಶಕ್ತಿ, ಅನ್ನಭಾಗ್ಯ, ಗೃಹಲಕ್ಷ್ಮಿ, ಗೃಹಜ್ಯೋತಿ, ಯುವನಿಧಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜೊತೆಗೆ ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನರ ಕಲ್ಯಾಣಕ್ಕಾಗಿ ಅನೇಕ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನ ಮಾಡುತ್ತಿದೆ. ಎಸ್ಸಿ ಪಿ ಟಿಎಸ್ಪಿ ಪ್ರತಿಭಾವಂತರಿಗೆ ಪ್ರೋತ್ಸಾಹ ಧನ, ಲೀಡ್ಕರ್ ಅನುಷ್ಠಾನ ಕಾರ್ಯಕ್ರಮ, ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ವಿವಿಧ ನಿಗಮಗಳ ಅನುಷ್ಠಾನ ಸೇರಿದಂತೆ ನಾನಾ ಕಾರ್ಯಕ್ರಮಗಳನ್ನು ರಾಜ್ಯ ಸರ್ಕಾರವು ಅಚ್ಚುಕಟ್ಟಾಗಿ ಜಾರಿ ಮಾಡುತ್ತಿದೆ ಎಂದು ತಿಳಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗವಿಸಿದ್ದಪ್ಪ ಹೊಸಮನಿ ಅವರು ಪ್ರಾಸ್ತಾವಿಕ ಮಾತನಾಡಿ, ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ 2025ರ ಆಗಸ್ಟ್ 16ರಂದು ನಡೆದ ಅನುಸೂಚಿತ ಜಾತಿ ಅನುಸೂಚಿತ ಪಂಗಡಗಳ ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಅನುಮೋದಿಸಿದಂತೆ, 2025-26ನೇ ಸಾಲಿನ ಎಸ್ಸಿ ಪಿ ಟಿಎಸ್ಪಿ ಕ್ರಿಯಾಯೋಜನೆಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನರಿಗಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳ ಕುರಿತಂತೆ ರಾಜ್ಯದ ವಿವಿಧೆಡೆಯ ಆಯ್ದ ಬಸ್ ನಿಲ್ದಾಣಗಳಲ್ಲಿ ನಡೆದಂತೆ ಲಿಂಗಸೂರು ಬಸ್ ನಿಲ್ದಾಣದಲ್ಲಿ ಸಹ ಪ್ರಚಾರ ಕಾರ್ಯ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜನವರಿ 30ರವರೆಗೆ ಪ್ರಚಾರ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ರೂಪಿಸಿರುವ ಮಾಹಿತಿ ಪ್ರದರ್ಶನ ಮಳಿಗೆಯು ಲಿಂಗಸೂರು ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಜನವರಿ 28 ರಿಂದ ಜನವರಿ 30ರವರೆಗೆ ಇರುತ್ತದೆ. ಸಾರ್ವಜನಿಕರು ಜನಾಕರ್ಷಣೀಯ ಈ ಮಳಿಗೆಗೆ ಭೇಟಿ ನೀಡಿ ವಿವಿಧ ಗ್ಯಾರಂಟಿ ಯೋಜನೆಗಳು ಮತ್ತು ಎಸ್ಸಿ ಪಿ ಹಾಗೂ ಟಿಎಸ್ಪಿ ಯೋಜನೆಗಳ ಅನುಷ್ಠಾನದ ಯಶೋಗಾಥೆಯ ಚಿತ್ರಣವನ್ನು ವೀಕ್ಷಣೆ ಮಾಡಬಹುದಾಗಿದೆ ಎಂದು ಇದೆ ವೇಳೆ ಗವಿಸಿದ್ದಪ್ಪ ಅವರು ಲಿಂಗಸೂರು ತಾಲೂಕಿನ ಜನತೆಯಲ್ಲಿ ಮನವಿ ಮಾಡಿದರು.

ಫೆ.1ರಿಂದ ದೇವದುರ್ಗದಲ್ಲಿ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ರೂಪಿಸಿರುವ ಈ ಮಾಹಿತಿ ಪ್ರದರ್ಶನ ಮಳಿಗೆಯು ಫೆ.1ರಿಂದ ಫೆ.3ರವರೆಗೆ ದೇವದುರ್ಗ ಪಟ್ಟಣದ ಕೇಂದ್ರ ಬಸ್ ನಿಲ್ದಾಣದಲ್ಲಿ ಅಳವಡಿಸಲಾಗುವುದು ಎಂದು ಗವಿಸಿದ್ದಪ್ಪ ಅವರು ಮಾಹಿತಿ ನೀಡಿದರು.

3ನೇ ಪುಟಕ್ಕೆ

ರಾಯಚೂರು ಉತ್ಸವ: ಆರ್‌ಟಿಪಿಎಸ್, ಕೆಪಿಸಿ ಡಿಎವಿ, ಬ್ಲೆಸ್ಡ್ ಆಲ್ಫೋನ್ಸಾ ಪ್ರೌಢಶಾಲೆಗಳಲ್ಲಿ ಪ್ರಚಾರ



ರಾಯಚೂರು ಜ.28-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಹಯೋಗದಲ್ಲಿ ಫೆ.5ರಿಂದ ಮೂರು ದಿನಗಳ ಕಾಲ ರಾಯಚೂರು ಜಿಲ್ಲೆಯಲ್ಲಿ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ಪ್ರಚಾರ ಕಾರ್ಯಕ್ರಮಗಳು ಜನವರಿ 28ರಂದು ಶಕ್ತಿನಗರದಲ್ಲಿನ ಆರ್‌ಟಿಪಿಎಸ್‌ನಲ್ಲಿ ಹಾಗೂ ಕೆಪಿಸಿ ಡಿಎವಿ ಪ್ರೌಢಶಾಲೆ ಮತ್ತು ಬ್ಲೆಸ್ಡ್ ಆಲ್ಫೋನ್ಸಾ ಪ್ರೌಢಶಾಲೆಗಳಲ್ಲಿ ನಡೆದವು.

ಪ್ರಚಾರ ಸಮಿತಿಯ ಸದಸ್ಯರು ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿ ಸದಾಶಿವಪ್ಪ ಅವರು ಮಾತನಾಡಿ, ರಾಯಚೂರು ಜಿಲ್ಲೆಯಲ್ಲಿ ಬಹುವರ್ಷಗಳ ನಂತರ ಜಿಲ್ಲಾ ಉತ್ಸವ ನಿಗದಿಯಾಗಿದೆ. ಇದು ನಮ್ಮೆಲ್ಲರ ಮನೆಯ ಹಬ್ಬವಾಗಿದೆ. ನಮ್ಮೂರಿನ ವಿವಿಧ ಕಲೆ ಸಾಹಿತ್ಯ ಪ್ರಕಾರಗಳ ಅನಾವರಣವು ಇಲ್ಲಿ ನಡೆಯಲಿದೆ. ಖ್ಯಾತ ಕಲಾವಿದರು ಕಾರ್ಯಕ್ರಮಕ್ಕೆ ಆಗಮಿಸಲಿದ್ದಾರೆ. ಎಲ್ಲರೂ ಸೇರಿ ಕಾರ್ಯಕ್ರಮದಲ್ಲಿ ಭಾಗಿಯಾಗಿ, ಉತ್ಸವ ಯಶಗೊಳಿಸೋಣ ಎಂದು ಇದೆ ವೇಳೆ ಮನವಿ ಮಾಡಿದರು.

3ನೇ ಪುಟಕ್ಕೆ

ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಪಂ ಸಿಇಓ ಈಶ್ವರ್ ಕಾಂದೂ ಸೂಚನೆ

ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಿರಲಿ

ರಾಯಚೂರು ಜ.28

ಬೇಸಿಗೆ ಆರಂಭವಾಗುತ್ತಿದ್ದು, ಎಲ್ಲಿಯೂ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನಿಗಾ ವಹಿಸಬೇಕು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕಾಂದೂ ಅವರು ಅಧಿಕಾರಿಗಳಿಗೆ ಸೂಚಿಸಿದರು.



ನಗರದ ಜಿಲ್ಲಾ ಪಂಚಾಯತಿ ಸಭಾಂಗಣ ದಲ್ಲಿ ಜನವರಿ 28ರಂದು ನಡೆದ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಕೆರೆಗಳನ್ನು ಭರ್ತಿ ಮಾಡಬೇಕು. ಬೋರ್‌ವೆಲ್‌ಗಳ ಇಳುವರಿ ಪರಿಶೀಲಿಸಬೇಕು. ಅಗತ್ಯ ಬಿದ್ದಲ್ಲಿ ಹೊಸ ಬೋರ್‌ವೆಲ್‌ಗಳನ್ನು ಕೊರೆಯಿಸಬೇಕು. ನೀರಿನ ತೊಟ್ಟಿಗಳನ್ನು ಶುಚಿಗೊಳಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆಗೆ ಗಮನಹರಿಸಬೇಕು. ಜಲ ಮೂಲಗಳಿಂದ ಯಾವುದಾದರೂ ಅಹಿತಕರ ಘಟನೆ ನಡೆದರೆ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ತಾಲೂಕು ಪಂಚಾಯ್ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿಸಲಾಗು ವುದು ಎಂದು ಅವರು ಎಚ್ಚರಿಕೆ ನೀಡಿದರು.

ಬೋರ್‌ವೆಲ್‌ಗಳ ಮರು ಪೂರಣಕ್ಕೆ ನರೇಗಾ ಯೋಜನೆಯಡಿ 2026-27ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಸೇರ್ಪಡೆ ಮಾಡಿಕೊಳ್ಳಬೇಕು. ಜೆಜೆಎಂ ಮತ್ತು ಜಲಧಾರೆ ಯೋಜನೆಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು. ಈ ಬಗ್ಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಅಧಿಕಾರಿಗಳು ಹೆಚ್ಚಿನ ಮುತುವರ್ಜಿ ವಹಿಸಬೇಕು ಎಂದರು.

ಸ್ವ-ಸಹಾಯ ಗುಂಪುಗಳನ್ನು ಇನ್ನಷ್ಟು ಬಲಪಡಿಸುವ ನಿಟ್ಟಿನಲ್ಲಿ ಕುಕ್ಕುಟ ಸಂಜೀವಿನಿ ಯೋಜನೆ ಆರಂಭಿಸುತ್ತಿದ್ದು, ಶಾಲೆ, ಅಂಗನವಾಡಿ, ಹಾಸ್ಟೆಲ್‌ಗಳಿಗೆ ಮಹಿಳಾ ಒಕ್ಕೂಟದಿಂದ ಮೊಟ್ಟೆ ಪೂರೈಸಬೇಕು. ಪ್ರತಿಯೊಂದು ಗ್ರಾಮ ಪಂಚಾಯತಿ 2026-27ನೇ ಸಾಲಿನ ನರೇಗಾ ಕ್ರಿಯಾ ಯೋಜನೆಯಲ್ಲಿ ಕಡ್ಡಾಯವಾಗಿ ಕುಕ್ಕುಟ ಶೆಡ್ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಬೇಕು. ದಿನ ಬಳಕೆಯ ವಸ್ತುಗಳ ಮಾರಾಟಕ್ಕೆ ತಾಲೂಕು ಕೇಂದ್ರದಲ್ಲಿ ಸಂಜೀವಿನಿ ಮಾರ್ಟ್ ನಿರ್ಮಿಸುತ್ತಿದ್ದು, ಒಕ್ಕೂಟದವರು ನಿರ್ವಹಿಸಲಿದ್ದಾರೆ. ಇದೇ ಮಾದರಿಯಲ್ಲಿ ವಿವಿಧ

3ನೇ ಪುಟಕ್ಕೆ

ರಾಷ್ಟ್ರೀಯ ಹೆಣ್ಣು ಮಗು ಜಾಗೃತಿ ದಿನ

ತಾಯಿ ಮಕ್ಕಳ ಆಸ್ಪತ್ರೆಗಳು ಮಹಿಳೆಯರ ಆರೋಗ್ಯ ಸುರಕ್ಷತೆಯ ಕೇಂದ್ರಗಳಾಗಿವೆ

ರಾಯಚೂರು,ಜ.28-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ರಾಯಚೂರಿನ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಜನವರಿ 28ರಂದು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನ ಕಾರ್ಯಕ್ರಮ ನಡೆಯಿತು.



ಆಸ್ಪತ್ರೆಯಲ್ಲಿ ಜನನವಾದ ಹೆಣ್ಣು ಮಕ್ಕಳಿಗೆ ಹೊಸ ಉಡುಪು ಹಾಗೂ ಸಿಹಿ ಪದಾರ್ಥ ತಾಯಂದಿರಿಗೆ ವಿತರಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು, ಪ್ರಸ್ತುತ ದಿನಗಳಲ್ಲಿ ಹೆರಿಗೆಯು ಕುಟುಂಬದ ಆರ್ಥಿಕ ತೊಂದರೆಗೆ ಕಾರಣವಾಗುತ್ತಿದೆ ಎಂಬ ನಂಬಿಕೆಯನ್ನು ದೂರಮಾಡಲು ಮತ್ತು ಮಗುವಿನ ಜನನದ ನಂತರ ಹೆಣ್ಣು ಗಂಡು ಎಂಬ ಭೇದ ತೊಲಗಿಸಲು ಮಹಿಳೆಯ ಆರೋಗ್ಯದ ದೃಷ್ಟಿಯಿಂದ ಕರ್ನಾಟಕ ಸರಕಾರವು ಸುಸಜ್ಜಿತ ಕಟ್ಟಡ, ಅತ್ಯಾಧುನಿಕ ಪರಿಕರಗಳು, ತಜ್ಞವೈದ್ಯರ ನೇಮಕದೊಂದಿಗೆ ತಾಯಿ ಮಕ್ಕಳ ಆಸ್ಪತ್ರೆಗಳನ್ನು ಜಿಲ್ಲೆಯ ರಾಯಚೂರು, ಮಾನ್ವಿ, ಸಿಂಧನೂರುಗಳಲ್ಲಿ ಜನಪ್ರತಿನಿಧಿಗಳ ಬೆಂಬಲ, ಜಿಲ್ಲಾಡಳಿತ ಮಾರ್ಗದರ್ಶನದಡಿ ಈಗಾಗಲೇ ಆರಂಭಿಸಲಾಗಿದೆ. ಹೆರಿಗೆಗೆ ಆಗಮಿಸುವ ಗರ್ಭಿಣಿಯು 'ಜನನಿ ಶಿಶು ಸುರಕ್ಷಾ ಯೋಜನೆ', ಸುಮನ್, ಲಕ್ಷ್ಯ ಕಾರ್ಯಕ್ರಮಗಳಡಿ ಸುರಕ್ಷಿತ ಹೆರಿಗೆಯೊಂದಿಗೆ ಸಂತಸದಿದ ನಗುಮಗು ವಾಹನದಲ್ಲಿ ಮನೆಗೆ ಮರಳುವ ಸುಂದರ ಕ್ಷಣಗಳನ್ನು ಹಂಚಿಕೊಳ್ಳಲಾಗುತ್ತಿದ್ದು, ಇದು ಜಿಲ್ಲೆಯಲ್ಲಿ ರಾಷ್ಟ್ರೀಯ ಹೆಣ್ಣು ಮಗು ದಿನದ ಸಂದರ್ಭದಲ್ಲಿ ತಾಯಿ ಮರಣಗಳ ತಡೆಯುವ ಜೊತೆಗೆ ಹೆಣ್ಣಿನ ಸುರಕ್ಷತೆಗೆ ಸರಕಾರದ ದಿಟ್ಟ ಹೆಜ್ಜೆಯಾಗಿದೆ. ಅಲ್ಲದೆ ಸರಕಾರದ ಯೋಜನೆಗಳ ಸದುಪಯೋಗ ಮಾಡಿಸುವ ಜೊತೆ ಜೊತೆಗೆ ಹೆಣ್ಣು ಮಗುವಿನ ಉನ್ನತ ಗುರಿ, ಸಾಧನೆಗೆ ಸಾಕ್ಷಿಯಾಗೋಣ ಎಂದು ತಿಳಿಸಿದರು.

3ನೇ ಪುಟಕ್ಕೆ

ಜಿಲ್ಲೆಯ ಎಲ್ಲ ಗ್ರಾಮಗಳು, ಹೋಬಳಿ, ತಾಲೂಕು ಕೇಂದ್ರಗಳಲ್ಲಿ

ಉತ್ಸವದ ಬ್ಯಾನರ್ ಅಳವಡಿಸಿ ಪ್ರಚಾರ ನೀಡಲು ಸಿಇಓ ಸೂಚನೆ



ರಾಯಚೂರು,ಜ.28-

ಬಹುವರ್ಷಗಳ ನಂತರ ರಾಯಚೂರು ಜಿಲ್ಲೆಯಲ್ಲಿ ಫೆ.5, ಫೆ.6 ಮತ್ತು ಫೆ.7ರಂದು ಮೂರು ದಿನಗಳ ಕಾಲ ನಿಗದಿಯಾದ ರಾಯಚೂರು ಜಿಲ್ಲಾ ಉತ್ಸವ ಯಶಸ್ಸಿಗೆ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ನ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಶ್ರಮಿಸಬೇಕು. ಉತ್ಸವದ ಬಗ್ಗೆ ಎಲ್ಲೆಡೆ ಪ್ರಚಾರ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕಾಂದೂ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಜನವರಿ 28ರಂದು ನಡೆದ ಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿ, ಜಿಲ್ಲಾ ಉತ್ಸವದ ಹಿನ್ನೆಲೆಯಲ್ಲಿ ಫೆ.2 ಮತ್ತು ಫೆ.3 ರಂದು ಮಕ್ಕಳ ಹಬ್ಬ ಸಹ ಜರುಗಲಿದೆ. ಈ ಎಲ್ಲ ಕಾರ್ಯಕ್ರಮಗಳ ಬಗ್ಗೆ ಜಿಲ್ಲೆಯ ಪ್ರತಿಯೊಂದು ಗ್ರಾಮಕ್ಕೂ ಮಾಹಿತಿ ರವಾನೆಯಾಗಬೇಕು. ಈ ದಿಶೆಯಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಎಲ್ಲ ಪಿಡಿಓ ಅವರು ತಮ್ಮ ತಮ್ಮ ಹಂತದಲ್ಲಿ ಸಭೆ ನಡೆಸಿ ಪ್ರಚಾರ ಕಾರ್ಯ ಕೈಗೊಳ್ಳಬೇಕು. ಎಲ್ಲ ಗ್ರಾಮಗಳು, ಹೋಬಳಿಗಳು ಸೇರಿದಂತೆ ಎಲ್ಲ ತಾಲೂಕು ಕೇಂದ್ರಗಳ ಪ್ರಮುಖ ಸ್ಥಳದಲ್ಲಿ ಉತ್ಸವದ ಮಾಹಿತಿಯ

3ನೇ ಪುಟಕ್ಕೆ

ಪೌರ ಕಾರ್ಮಿಕರಿಗೆ ಸ್ವಚ್ಛತೆಯ ಪಾಠ ಮಾಡಿದ ಆಯುಕ್ತರು

ಉತ್ಸವದಲ್ಲಿ ರಾಯಚೂರು ಸಿಟಿ ಸುಂದರವಾಗಿ ಕಾಣಲಿ: ಜುಬಿನ್ ಮೊಹಪಾತ್ರ

ರಾಯಚೂರು ಜನವರಿ 28-

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವವು ಯಶಸ್ವಿಯಾಗಿ ನಡೆಯುವ ನಿಟ್ಟಿನಲ್ಲಿ ರಾಯಚೂರು ಸಿಟಿಯು ಸುಂದರವಾಗಿ ಕಾಣಬೇಕು. ಈ ದಿಶೆಯಲ್ಲಿ ಯೋಚಿಸಿ ಪ್ರತಿಯೊಬ್ಬ ಪೌರ ಕಾರ್ಮಿಕರು ಸ್ವಚ್ಛತಾ ಕಾರ್ಯದಲ್ಲಿ ಸಕ್ರಿಯ ಭಾಗಿಯಾಗಬೇಕು ಎಂದು ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೋಹಪಾತ್ರ ಅವರು ಹೇಳಿದರು.

ನಗರದ ಜೈಲ್‌ಖಾನ್ ಬಳಿಯಲ್ಲಿರುವ ಮಹಿಳಾ ಸಮಾಜ ಮೈದಾನದಲ್ಲಿ ಜನವರಿ 28ರಂದು ಪೌರ ಕಾರ್ಮಿಕರ ಸಭೆ ನಡೆಸಿ ಅವರು ಮಾತನಾಡಿದರು.

ಶುಚಿತ್ವ ಇದ್ದಲ್ಲಿ, ಶಿಸ್ತು ಇದ್ದಲ್ಲಿ ಶಾಂತಿ ಇರುತ್ತದೆ. ಈ ದಿಶೆಯಲ್ಲಿ ನಾವೆಲ್ಲರೂ ಯೋಚಿಸಿ ಉತ್ಸವದ ನಿಗದಿಯಾದ ಈ ಸಂದರ್ಭದಲ್ಲಿ ನಮ್ಮ ನಮ್ಮ ಮನೆ, ಮನೆಯ ಸುತ್ತಲಿನ ಪರಿಸರ, ರಸ್ತೆ, ಗಟಾರು, ಸಾರ್ವಜನಿಕ ಸ್ಥಳಗಳು ಸೇರಿದಂತೆ ವಿವಿಧೆಡೆಯಲ್ಲಿ ಶುಚಿತ್ವಕ್ಕೆ ಒತ್ತು ಕೊಡಬೇಕು. ರಾಯಚೂರು ಜಿಲ್ಲಾ ಉತ್ಸವಕ್ಕೆ ಅತಿಥಿಗಳಾಗಿ ಆಮಿಸುವ ಜನತೆಗೆ ರಾಯಚೂರು ನಗರವು ಸುಂದರವಾಗಿ ಕಾಣುವಂತಾಗಬೇಕು. ಜನತೆಗೆ ಸ್ವಚ್ಛತೆಯ ಸಂದೇಶ ರವಾನೆಯಾಗಬೇಕು.




ರಾಯಚೂರ ನಗರವನ್ನು ಸ್ವಚ್ಛ ನಗರವೆಂದು ಜನರು ಕೊಂಡಾಡುವತೆ ಮಾಡುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಆಯುಕ್ತರು ಪೌರ ಕಾರ್ಮಿಕರಿಗೆ ಸ್ವಚ್ಛತೆಯ ಪಾಠ ಮಾಡಿದರು.

ರಾಯಚೂರು ಉತ್ಸವಕ್ಕೆ ಇನ್ನು ಒಂದು ವಾರ ಮಾತ್ರ ಬಾಕಿ ಇದೆ. ಈಗಾಗಲೇ ನಗರದಲ್ಲಿ ಕಸ ಸಂಗ್ರಹ ಸ್ಥಳಗಳಲ್ಲಿ ನಿತ್ಯ ಕಸ ವಿಲೇವಾರಿ ನಡೆಯುತ್ತಿದೆ. ನಿತ್ಯ ಮನೆ ಮನೆ ಕಸ ಸಂಗ್ರಹ, ಕಾರ್ಖಾನೆ, ಆಸ್ಪತ್ರೆ ಸೇರಿದಂತೆ ಎಲ್ಲಾ ಕಡೆಗಳಲ್ಲಿ ಕಸ ವಿಲೇವಾರಿ ನಡೆಯುತ್ತಿದೆ. ಬೇರೆ ಬೇರೆ ಕಡೆಗಳಲ್ಲಿ ಸ್ವಚ್ಛತೆ ಕಾಣಲಾರಂಭಿಸಿದೆ. ಈ ಕೆಲಸ ನಿರಂತರ ಮುಂದುವರೆಯಬೇಕು ಎಂದು ಸೂಚನೆ ನೀಡಿದರು.

ಉತ್ಸವಕ್ಕೂ ಮುಂಚಿತವಾಗಿ ಪ್ರತಿಯೊಬ್ಬರು ಸ್ವಚ್ಛತೆಯ ಕಡೆಗೆ ಮೊದಲ ಆದ್ಯತೆ ನೀಡಬೇಕು. ರಾಜ್ಯ, ಅಂತಾರಾಜ್ಯ, ಮಟ್ಟದ ಕಲಾವಿದರು ಮೊದಲ ಬಾರಿಗೆ ಜಿಲ್ಲೆಗೆ ಆಗಮಿಸಲಿದ್ದಾರೆ. ಅವರಿಗೆ ರಾಯಚೂರು ಸ್ವಚ್ಛ ನಗರವೆಂದು ತೋರಿಸಿಕೊಡಬೇಕಾಗಿದೆ.

3ನೇ ಪುಟಕ್ಕೆ

ಬಾಗಲಕೋಟೆ ಉಪ ಚುನಾವಣೆ ಬಿಜೆಪಿ ಪೂರ್ವಭಾವಿ ಸಭೆ
ಚುನಾವಣಾ ಉಸ್ತುವಾರಿ ಅರುಣ ಶಹಾಪೂರ ಹಾಗೂ ಗೋವಿಂದ ಕಾರಜೋಳ ನೇತೃತ್ವದಲ್ಲಿ ಸಭೆ : ಎಲ್ಲ ನಾಯಕರು ಭಾಗಿ



ಬಾಗಲಕೋಟೆ,ಜ.28-

ಬಾಗಲಕೋಟೆಯ ಉಪ ಚುನಾವಣೆ ಗೆಲುವು ಮುಂದಿನ 2028ರ ವಿಧಾನಸಭೆ ಚುನಾವಣೆಗೆ ದಿಕ್ಸೂಚಿಯಾಗಲಿದೆ ಎಂದು ಬಾಗಲಕೋಟೆ ಉಪ ಚುನಾವಣಾ ಉಸ್ತುವಾರಿ ಅರುಣ ಶಹಾಪೂರ ಹೇಳಿದರು.


ಅವರು ನವನಗರದ ಭಾರತೀಯ ಜನತಾ ಪಾರ್ಟಿ ಜಿಲ್ಲಾ ಕಾರ್ಯಾಲಯದಲ್ಲಿ ನಡೆದ ಬಾಗಲಕೋಟೆ ಉಪ ಚುನಾವಣೆಯ ಪೂರ್ವ ಭಾವಿಯ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು ಬಾಗಲಕೋಟೆಯಲ್ಲಿ ಅಭಿವೃದ್ಧಿ ಕೆಲಸಗಳ ಮೂಲಕ ಇಲ್ಲಿ ಬಿಜೆಪಿ ಭದ್ರಕೋಟೆಯಾಗಿದೆ, ಅದನ್ನು ಮತ್ತೆ ಮರುಸ್ಥಾಪಿಸುವ ಸಂಕಲ್ಪ ನಮ್ಮ ಮುಂದೆ ಇದೆ, ಈ ಉಪ ಚುನಾವಣೆಯಲ್ಲಿನ ಬಿಜೆಪಿ ಗೇಲೂವು ಮುಂದಿನ 2028ರ ವಿಧಾನ ಸಭೆ ಸಾರ್ವತ್ರಿಕ ಚುನಾವಣೆಗೆ ದಿಕ್ಸೂಚಿಯಾಗಲಿದೆ ಎಂದರು.

ಮಾಜಿ ಉಪ ಮುಖ್ಯಮಂತ್ರಿಗಳು, ಚಿತ್ರದುರ್ಗದ ಸಂಸದರಾದ ಗೋವಿಂದ ಕಾರಜೋಳ ಮಾತನಾಡಿ ಬಾಗಲಕೋಟೆಯ ಉಪ ಚುನಾವಣೆಯಲ್ಲಿ ಬಿಜೆಪಿ ಗೆಲ್ಲಲೂ ಸಾಕಷ್ಟು ಅವಕಾಶಗಳು ಇವೆ, ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳು ನಡೆಯುತ್ತಿಲ್ಲಾ, ಎಲ್ಲಿ ನೋಡಿದಲ್ಲಿ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ, ಕಾಂಗ್ರೆಸ್ಸ ಸರಕಾರದ ಆಡಳಿತಕ್ಕೆ ಜನ ಬೇಸತ್ತು ಹೋಗಿದ್ದಾರೆ, ಬಾಗಲಕೋಟೆಯಲ್ಲಿ ನಮ್ಮ ಗೇಲುವು ಶತಸಿದ್ದ ಎಂದರು.

ಮಾಜಿ ಸಚಿವ ಬಿಜೆಪಿಯ ರಾಜ್ಯ ಉಪಾಧ್ಯಕ್ಷರಾದ ಮುರಗೇಶ ನಿರಾಣಿ ಮಾತನಾಡಿ ಜಿಲ್ಲೆಯಲ್ಲಿ ನಾವು ಎಲ್ಲ ನಾಯಕರೂ ಒಂದಾಗಿದ್ದೆವೆ, ಎಲ್ಲರೂ ಕೂಡಿ ಬಾಗಲಕೋಟೆ ಉಪ ಚುನಾವಣೆಯಲ್ಲಿ ಬಿಜೆಪಿಯನ್ನು ಗೇಲ್ಲಿಸೋಣ, ಮತ್ತೆ ರಾಜ್ಯದಲ್ಲಿ ಬಿಜೆಪಿ ಪಕ್ಷ ಅಧಿಕಾರಕ್ಕೆ ಬರುವುದು ನಿಶ್ಚಿತ ಎಂದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಸಂಸದ ಪಿ.ಸಿ. ಗದ್ದಿಗೌಡರ ಹಾಗೂ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ ಮಾತನಾಡಿದರು. ಸಭೆಯಲ್ಲಿ ಮಾಜಿ ಶಾಸಕರಾದ ಡಾ.ವೀರಣ್ಣ ಚರಂತಿಮಠ, ಜಮಖಂಡಿ ಶಾಸಕರಾದ ಜಗದೀಶ ಗುಡುಗುಂಟಿ, ವಿಧಾನ ಪರಿಷತ್ ಸದಸ್ಯರಾದ ಹನಮಂತ ನಿರಾಣಿ, ಮಾಜಿ ಶಾಸಕರಾದ ದೊಡ್ಡನಗೌಡ ಪಾಟೀಲ, ಜಿ.ಎಸ್.ನ್ಯಾಮಗೌಡ, ರಾಜಶೇಖರ ಶೀಲವಂತ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ, ಮಲ್ಲಯ್ಯ ಮೂಗನೂರಮಠ, ಅಶೋಕ ಲಿಂಬಾವಳಿ, ಬಸವರಾಜ ಯಂಕಂಚಿ ಸೇರಿದಂತೆ ಅನೇಕರು ವೇದಿಕೆ ಮೇಲೆ ಉಪಸ್ಥಿತರಿದ್ದರು. ಸಭೆಯಲ್ಲಿ ಬಾಗಲಕೋಟೆ ಮತಕ್ಷೇತ್ರದ ಶಕ್ತಿಕೇಂದ್ರ ಪ್ರಮುಖರು ಭಾಗವಹಿಸಿದ್ದರು.

ಮತದಾರರ ಪಟ್ಟಿ ಪರಿಷ್ಕರಣೆ ನಿರಂತರ ಪ್ರಕ್ರಿಯೆಯಾಗಬೇಕು : ರಾಜೇಶ್
ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮ



ಸಿರುಗುಪ್ಪ,ಜ.28-

ಚುನಾವಣಾ ಸಂದರ್ಭದಲ್ಲಿ ಮಾತ್ರ ಮತದಾರರ ಪಟ್ಟಿ ಪರಿಷ್ಕರಣೆ ಚುರುಕುಗೊಳಿಸುವ ಬದಲು, ಈ ಪ್ರಕ್ರಿಯೆ ನಿರಂತರವಾಗಿ ನಡೆಯುವ ಕಾರ್ಯವಾಗಬೇಕು ಎಂದು ಬಳ್ಳಾರಿ ಜಿಲ್ಲಾ ಸಹಾಯಕ ಆಯುಕ್ತ ರಾಜೇಶ್ ಅವರು ಹೇಳಿದರು.

ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಸಭಾಭವನದಲ್ಲಿ ಜಿಲ್ಲಾ ಹಾಗೂ ತಾಲೂಕು ಚುನಾವಣಾ ಆಯೋಗದ ವತಿಯಿಂದ ಆಯೋಜಿಸಲಾಗಿದ್ದ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿಯೊಂದು ಮತಗಟ್ಟೆ ಮಟ್ಟದಲ್ಲಿ ಈಗಿನಿಂದಲೇ ಮತದಾರರ ಪಟ್ಟಿಯ ಪರಿಶೀಲನೆ ನಡೆಸಿ, ಹೊಸ ಸೇರ್ಪಡೆ, ತೆಗೆದುಹಾಕಬೇಕಾದ ಹೆಸರುಗಳು ಹಾಗೂ ಎರಡೆರಡು ಕಡೆಗಳಲ್ಲಿ ಇರುವ ಹೆಸರುಗಳನ್ನು ಒಂದೇ ಕಡೆ ಉಳಿಸುವಂತೆ ಕ್ರಮವಹಿಸಬೇಕು ಎಂದು ಸೂಚಿಸಿದರು. ಎಲ್ಲ ಅರ್ಹ ಮತದಾರರು ತಮ್ಮ ಹೆಸರನ್ನು ಪಟ್ಟಿಗೆ ಸೇರಿಸಿಕೊಳ್ಳುವಂತೆ ಅರಿವು ಮತ್ತು ಪ್ರೇರಣೆ ನೀಡಬೇಕು ಎಂದರು.

ಮತದಾರರ ಪಟ್ಟಿಯ ಸಮರ್ಪಕ ಪರಿಷ್ಕರಣೆ ಇಲ್ಲದಿದ್ದರೆ ಮತದಾನ ಪ್ರಮಾಣವನ್ನು ಸಂಪೂರ್ಣವಾಗಿ ಸುಧಾರಿಸುವುದು ಕಷ್ಟ ಎಂದು ಅಭಿಪ್ರಾಯಪಟ್ಟ ಅವರು, ಈ ಕಾರ್ಯಕ್ಕೆ ಅಗತ್ಯವಿರುವ ಎಲ್ಲಾ ರೀತಿಯ ನೆರವನ್ನು ಚುನಾವಣಾ ಶಾಖೆಯಿಂದ ನೀಡಲಾಗುವುದು ಎಂದು ಭರವಸೆ ನೀಡಿದರು.

ತಾಲೂಕು ಹಾಗೂ ಹೋಬಳಿ ಹಂತದಲ್ಲಿ ಪ್ರಕ್ರಿಯೆಯನ್ನು ಇನ್ನಷ್ಟು ಚುರುಕುಗೊಳಿಸಿ, ಅರ್ಜಿಗಳನ್ನು ಕಾಯ್ದಿರಿಸದೆ ಈಗಿನಿಂದಲೇ ವಿಲೇವಾರಿ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಪ್ರತಿಯೊಬ್ಬ ಅರ್ಹ ನಾಗರಿಕನ ಹೆಸರು ಮತದಾರರ ಪಟ್ಟಿಯಲ್ಲಿ ಇರಬೇಕು. ಪಟ್ಟಿಯನ್ನು ಕಾಲಕಾಲಕ್ಕೆ ನವೀಕರಿಸುವುದೇ ಮತದಾರರ ಪಟ್ಟಿ ಪರಿಷ್ಕರಣೆ ಎಂಬುದನ್ನು ಅವರು ವಿವರಿಸಿದರು.

18 ವರ್ಷ ಪೂರ್ಣಗೊಂಡ ಪ್ರತಿಯೊಬ್ಬ ಯುವಕ-ಯುವತಿಯೂ ತಕ್ಷಣವೇ ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರಿಸಲು ಅರ್ಜಿ ಸಲ್ಲಿಸಬೇಕು. ಇದು ಕೇವಲ ಹಕ್ಕು ಮಾತ್ರವಲ್ಲ, ಪ್ರಮುಖ ನಾಗರಿಕ ಕರ್ತವ್ಯವೂ ಹೌದು ಎಂದರು.

ಪರಿಷ್ಕರಣೆ ಸಂದರ್ಭದಲ್ಲಿ ಮತದಾರರು ತಮ್ಮ ಹೆಸರು, ತಂದೆಯ ಹೆಸರು, ವಯಸ್ಸು ಮತ್ತು ವಿಳಾಸ ಸರಿಯಾಗಿದೆಯೇ ಎಂದು ಪರಿಶೀಲಿಸಬೇಕು. ತಪ್ಪುಗಳಿದ್ದಲ್ಲಿ ನಮೂನೆ8 ಮೂಲಕ ತಿದ್ದುಪಡಿ ಮಾಡಿಕೊಳ್ಳಬೇಕು. ಒಂದು ಮತಕ್ಷೇತ್ರದಿಂದ ಮತ್ತೊಂದಕ್ಕೆ ವಾಸಸ್ಥಳ ಬದಲಾದಲ್ಲಿ, ಹಳೆಯ ಕ್ಷೇತ್ರದಿಂದ ಹೆಸರು ತೆಗೆದು ಹೊಸ ಕ್ಷೇತ್ರದಲ್ಲಿ ಸೇರಿಸುವಂತೆ ಕ್ರಮವಹಿಸಬೇಕು. ಕುಟುಂಬದ ಯಾರಾದರೂ ಮೃತಪಟ್ಟರೆ ಅಥವಾ ಸ್ಥಳಾಂತರಗೊಂಡರೆ ಅವರ ಹೆಸರು ಪಟ್ಟಿಯಿಂದ ತೆಗೆದುಹಾಕಲು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಿರುಗುಪ್ಪ ಸಹಾಯಕ ಮತದಾರರ ನೋಂದಣಿ ಅಧಿಕಾರಿ ಹಾಗೂ ತಹಶೀಲ್ದಾರ್ ಗೌಸಿಯಾ ಬೇಗಂ, ಮತದಾರರ ನೋಂದಣಿ ಅಧಿಕಾರಿ ಸೋಮಸುಂದರ್, ರಾಷ್ಟ್ರೀಯ ಸಾಕ್ಷರತಾ ಅಧಿಕಾರಿ ಅಬ್ದುಲ್ ನಬಿ, ತಾಲೂಕಿನ ಮೇಲ್ವಿಚಾರಕರು, ಕಂದಾಯ ಪರಿವೀಕ್ಷಕ ಮಂಜುನಾಥ, ನಗರಸಭೆ ಅಧಿಕಾರಿ ರಾಜಭಕ್ಷಿ, ಬಿಎಲ್‌ಒಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

ವಾರದಲ್ಲಿ 5 ದಿನಗಳ ಕೆಲಸ ಜಾರಿಗೆ ಒತ್ತಾಯಿಸಿ ಮುಷ್ಕರ



ಬೀದರ್,ಜ.28-

ವಾರದಲ್ಲಿ ಐದು ದಿನಗಳ ಕೆಲಸ ವ್ಯವಸ್ಥೆ ಜಾರಿಗೆ ತರಬೇಕು ಹಾಗೂ ಶನಿವಾರವನ್ನು ಸಂಪೂರ್ಣ ಸಾಮಾನ್ಯ ರಜೆ ಎಂದು ಘೋಷಿಸಬೇಕೆಂಬ ಬೇಡಿಕೆಯನ್ನು ಈಡೇರಿಸುವಂತೆ ಒತ್ತಾಯಿಸಿ ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯುನಿಯನ್ಸ್ ಬೀದರ್ ಘಟಕದ ವತಿಯಿಂದ ಮಂಗಳವಾರ ಒಂದು ದಿನದ ಮುಷ್ಕರ ನಡೆಸಲಾಯಿತು.

ನಗರದ ಭಾರತೀಯ ಸ್ಟೇಟ್ ಬ್ಯಾಂಕ್ ಮುಖ್ಯ ಶಾಖೆ ಎದುರಿನ ಶಿವಾಜಿ ಚೌಕ್ ಬಳಿ ಬೆಳಗ್ಗೆ 11 ಗಂಟೆಗೆ ಈ ಮುಷ್ಕರ ನಡೆಯಿತು.

ಈಗಾಗಲೇ ನಾಲ್ಕನೇ ಶನಿವಾರ, ಭಾನುವಾರ ಹಾಗೂ ಗಣರಾಜ್ಯೋತ್ಸವದ ಹಿನ್ನೆಲೆಯಲ್ಲಿ ಮೂರು ದಿನ ಬ್ಯಾಂಕ್‌ಗಳು ಕಾರ್ಯ ನಿರ್ವಹಿಸಿರಲಿಲ್ಲ. ವಾರದಲ್ಲಿ ಐದು ದಿನಗಳಷ್ಟೇ ಕೆಲಸ ಇರಬೇಕು ಹಾಗೂ ಶನಿವಾರವನ್ನು ಸಂಪೂರ್ಣ ರಜೆ ಎಂದು ಘೋಷಿಸಬೇಕು ಎಂಬ ಬೇಡಿಕೆಗೆ ಕೇಂದ್ರ ಸರ್ಕಾರ ಕಳೆದ ಎರಡು ವರ್ಷಗಳಿಂದ ಯಾವುದೇ ಸ್ಪಷ್ಟ ತೀರ್ಮಾನ ಕೈಗೊಂಡಿಲ್ಲ ಎಂದು ಯುಎಫ್‌ಬಿಯು ಆರೋಪಿಸಿದೆ.

ಶನಿವಾರ ರಜೆ ನೀಡಿದಲ್ಲಿ, ಸೋಮವಾರದಿಂದ ಶುಕ್ರವಾರ ದವರೆಗೆ ಪ್ರತಿದಿನ 40 ನಿಮಿಷ ಹೆಚ್ಚುವರಿ ಕೆಲಸ ಮಾಡಲು ಬ್ಯಾಂಕ್ ನೌಕರರು ಸಿದ್ಧರಿದ್ದಾರೆ ಎಂಬುದನ್ನೂ ಯುಎಫ್‌ಬಿಯು ಕೇಂದ್ರ ಸರ್ಕಾರಕ್ಕೆ ತಿಳಿಸಿದರೂ, ಇದಕ್ಕೆ ಇನ್ನೂ ಅನುಮೋದನೆ ದೊರೆತಿಲ್ಲ ಎಂದು ಸಂಘಟನೆ ದೂರಿದೆ.

ಈ ಮುಷ್ಕರದ ಪರಿಣಾಮವಾಗಿ ದೇಶಾದ್ಯಂತ ಸಾರ್ವಜನಿಕ ವಲಯದ ಬ್ಯಾಂಕ್‌ಗಳ ಕಾರ್ಯ ಚಟುವಟಿಕೆಗಳಲ್ಲಿ ವ್ಯತ್ಯಯ ಉಂಟಾಗಿದ್ದು, ಬೀದರ್ ಜಿಲ್ಲೆಯಲ್ಲಿಯೂ ಸಾರ್ವಜನಿಕ ಬ್ಯಾಂಕ್‌ಗಳ ಸೇವೆಗಳು ಅಸ್ತವ್ಯಸ್ತವಾಗಿದ್ದವು. ಆದರೆ ಖಾಸಗಿ ಬ್ಯಾಂಕ್‌ಗಳ ಕಾರ್ಯನಿರ್ವಹಣೆಯಲ್ಲಿ ಯಾವುದೇ ವ್ಯತ್ಯಯ ಉಂಟಾಗಲಿಲ್ಲ.

ರಾಷ್ಟ್ರವ್ಯಾಪಿ ಮುಷ್ಕರದ ಭಾಗವಾಗಿ ಬೀದರ್‌ನಲ್ಲಿ ನಡೆದ ಈ ಪ್ರತಿಭಟನೆಯಲ್ಲಿ ಯುಎಫ್‌ಬಿಯು ಬೀದರ್ ಘಟಕದ ಸಂಚಾಲಕ ರಮೇಶ್ ಶಿಂಧೆ ನೇತೃತ್ವ ವಹಿಸಿದ್ದರು.

ಸಂತೋಷಕುಮಾರ್ ಮಿತ್ರಾ, ಪರಮೇಶ್ವರ್ ರೆಡ್ಡಿ, ಶೇಶಿಕಾಂತ್ ಕಾಳೆ, ಶೇಖ್ ನಿಸಾರ್, ಸಿದ್ರಾಮ್ ಸೀತಾ, ಅಶೋಕಕುಮಾರ್, ಸುಧಾ ರಾಣಿ, ಲಲಿತಾ ಬಿರಾದಾರ್, ದೀಪಿಕಾ ಮೋರೆ, ಕೇನರಾ ಬ್ಯಾಂಕಿನ ಸಂತೋಷ್ ಪರಮ್ಮಾ, ಚಂದ್ರಶೇಖರ್, ಸಂತೋಷ್ ಕೋರೆ ಹಾಗೂ ಬ್ಯಾಂಕ್ ಆಫ್ ಇಂಡಿಯಾದ ಸಚಿನ್ ಸೇರಿದಂತೆ ವಿವಿಧ ಬ್ಯಾಂಕ್‌ಗಳ ಅಧಿಕಾರಿಗಳು ಮತ್ತು ಸಿಬ್ಬಂದಿವರ್ಗದವರು ಮುಷ್ಕರದಲ್ಲಿ ಇದ್ದರು.



ವಾರ್ತಾ ಇಲಾಖೆಯಲ್ಲಿ 77ನೇ ಗಣರಾಜ್ಯೋತ್ಸವ ದಿನಾಚರಣೆ

ಬಳ್ಳಾರಿ,ಜ.28- ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿ ಅವರಣದಲ್ಲಿ 77ನೇ ಗಣರಾಜ್ಯೋತ್ಸವದ ದಿನಾಚರಣೆ ಅಂಗವಾಗಿ ಸೋಮವಾರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕ ವಿ.ಸಿ.ಗುರುರಾಜ ಅವರು ಧ್ವಜಾರೋಹಣ ನೆರವೇರಿಸಿದರು. ಇದೇ ಸಂದರ್ಭದಲ್ಲಿ ಗಣ ರಾಜ್ಯೋತ್ಸವದ ದಿನಾಚರಣೆಯ ಶುಭಾಷಯ ಕೋರಿದರು. ಈ ವೇಳೆ ಕಚೇರಿಯ ಸಿಬ್ಬಂದಿಗಳಾದ ಹನುಮೇಶ್. ಹೆಚ್., ವಿಜಯಕುಮಾರ್.ಹೆಚ್., ರೋಜ ಮೇರಿ, ವಿ.ಹನುಮಂತು, ಮಲ್ಲೇಶಪ್ಪ, ಶ್ರೀಧರ್ ಕವಾಲಿ, ಪತ್ರಕರ್ತರಾದ ಪೀರಸಾಬ್, ಮುರಳಿಕಾಂತ ರಾವ್ ಇದ್ದರು.

ಬಳ್ಳಾರಿ: 77 ನೇ ಗಣರಾಜ್ಯೋತ್ಸವ ಅಂಗವಾಗಿ ರಾಷ್ಟ್ರಧ್ವಜಾರೋಹಣ
ಸಂವಿಧಾನದಿಂದ ಸರ್ವರಿಗೂ ಸಮಾನತೆ-ಸಚಿವ ರಹೀಂ ಖಾನ್

ಬಳ್ಳಾರಿ,ಜ.28-

ಮಹಾನ್ ಮಾನವತಾವಾದಿ ಡಾ.ಬಿ.ಆರ್ ಅಂಬೇಡ್ಕರ್ ಅವರು ರಚಿಸಿದ ಭಾರತದ ಸಂವಿಧಾನದಿಂದ ದೇಶದಲ್ಲಿ ಸರ್ವರಿಗೂ ಸಮಾನತೆ ಲಭಿಸಿದೆ ಎಂದು ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ ಅವರು ಹೇಳಿದರು.

ಜಿಲ್ಲಾಡಳಿತ ವತಿಯಿಂದ ನಗರದ ಬಿಎಂಸಿಆರ್‌ಸಿ ಮೈದಾನದ ಆವರಣದಲ್ಲಿ ಸೋಮವಾರ ಏರ್ಪಡಿಸಿದ್ದ 77ನೇ ಗಣರಾಜ್ಯೋತ್ಸವ ದಿನಾಚರಣೆಯ ಅಂಗವಾಗಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಬಳಿಕ ಅವರು ಮಾತನಾಡಿದರು.



ನಮ್ಮ ದೇಶವು ವಿವಿಧತೆಯಲ್ಲಿ ಏಕತೆ ಹೊಂದಿದ ರಾಷ್ಟ್ರವಾಗಿದೆ. ದೇಶದಲ್ಲಿ ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಭಾವನೆಗಳು ಇವೆ ಎಂದರೆ ಅದು ಸಂವಿಧಾನ ನಮಗೆ ನೀಡಿರುವ ಕೊಡುಗೆಯಾಗಿದೆ ಎಂದರು.

ಭಾರತ ದೇಶದ ಇತಿಹಾಸದಲ್ಲಿ ಆಗಸ್ಟ್ 15 ಮತ್ತು ಜನವರಿ 26 ಅತ್ಯಂತ ಮಹತ್ವದ ದಿನಗಳಾಗಿವೆ. ಜ.26 ರಂದು ಇಡೀ ಸ್ವತಂತ್ರ ಭಾರತವನ್ನು ಗಣರಾಜ್ಯ ಎಂದು ಘೋಷಿಸಲಾಯಿತು.

ಭಾರತವು ಸಾರ್ವಭೌಮ ಗಣರಾಜ್ಯವಾಯಿತು. ಇದನ್ನು ಪ್ರಜಾರಾಜ್ಯೋತ್ಸವ ಎಂದು ಕರೆಯುತ್ತೇವೆ. ದೇಶಕ್ಕೆ ಪ್ರಜಾಪ್ರಭುತ್ವದ ಆಡಳಿತ ಪದ್ಧತಿಯನ್ನು ಅಳವಡಿಸಿಕೊಂಡ ಸಂಭ್ರಮದ ಈ ದಿನವಾಗಿದೆ ಎಂದು ತಿಳಿಸಿದರು.

ನಮ್ಮ ಸಂವಿಧಾನದ ಪ್ರಸ್ತಾವನೆಯಲ್ಲಿ ನಮ್ಮ ದೇಶದ ಜನಜೀವನದ ಆಶೋತ್ತರಗಳು ಹುದುಗಿವೆ. ಅವುಗಳನ್ನು ಸಾಕಾರಗೊಳಿಸುವ ಪ್ರಯತ್ನದಲ್ಲಿ ನಾವೆಲ್ಲರೂ ತೊಡಗಬೇಕು. ಸಂವಿಧಾನದ ಪೂರ್ವದಲ್ಲಿ ರಾಜನ ಮಗ ರಾಜ ಆಗುತ್ತಿದ್ದನು. ಆದರೆ ಸಂವಿಧಾನ ಜಾರಿಗೆ ಬಂದ ನಂತರ ಪ್ರತಿಯೊಬ್ಬರೂ ದೇಶ ಆಳುವ ನಾಯಕನಾಗುವ ಅವಕಾಶ ಕಲ್ಪಿಸಿಕೊಟ್ಟಿದೆ. ಶಿಕ್ಷಣದಿಂದ ಉನ್ನತ ಹುದ್ದೆಗಳನ್ನು ಅಲಂಕರಿಸುವ ಅವಕಾಶ ಕಲ್ಪಿಸಿಕೊಟ್ಟಿದೆ ಎಂದರು.

ಪ್ರಜಾಪ್ರಭುತ್ವದ ಬೆನ್ನೆಲುಬಾಗಿರುವ ಸ್ಥಳೀಯ ಆಡಳಿತ ವ್ಯವಸ್ಥೆಯನ್ನು ಬಲಪಡಿಸಿ ಬಲಿಷ್ಠ ರಾಷ್ಟ್ರ ಕಟ್ಟುವ ಹಾಗೂ ದೇಶದ ಸಮಗ್ರತೆ ಮತ್ತು ಐಕ್ಯತೆಯನ್ನು ಕಾಪಾಡುವ ಕಾರ್ಯದಲ್ಲಿ, ದೇಶದ ರಕ್ಷಣಾ ಕಾರ್ಯದಲ್ಲಿ ಯೋಧರೊಂದಿಗೆ ಪ್ರತಿಯೊಬ್ಬ ಭಾರತೀಯನು ಕೈಜೋಡಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಪ್ರತಿಪಾದಿಸಿದರು.

ನಮ್ಮ ಸರ್ಕಾರವು ಬಡವರು, ರೈತರ ಪರವಾಗಿದೆ. ಎಲ್ಲರಿಗೂ ಸಮಾನತೆ ಕಲ್ಪಿಸಿದೆ. ನಮ್ಮ ಸರ್ಕಾರ ಬಂದ ಮೇಲೆ ಬಡ, ಶೋಷಿತ ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಪಣತೊಟ್ಟಿದ್ದು, ಕರ್ನಾಟಕ ರಾಜ್ಯ ಸರ್ಕಾರ ಜಾರಿಗೊಳಿಸಿದ ಐದು ಗ್ಯಾರಂಟಿ ಯೋಜನೆಗಳಿಂದ ಕೂಲಿ ಕಾರ್ಮಿಕರ, ರೈತರ, ನಗರ ಬಡಜನರ, ಸರ್ವರ ಆರ್ಥಿಕ ಹೊಣೆಯನ್ನು ನಿಭಾಯಿಸಿದೆ ಎಂದರು.

ನಗರಗಳ ಸಮಗ್ರ ಅಭಿವೃದ್ಧಿಗೆ ರಾಜ್ಯ ಸರ್ಕಾರದ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ, ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆ, ಸ್ವಚ್ಛ ಭಾರತ್ ಮಿಷನ್, ಅಮೃತ 2.0 ಯೋಜನೆ, 15ನೇ ಹಣಕಾಸು ಯೋಜನೆಗಳ ಮೂಲಕ ಪ್ರಗತಿ ಸಾಧಿಸಲಾಗಿದೆ. ಹಲವಾರು ವರ್ಷಗಳಿಂದ ದಾಖಲೆಗಳಿಲ್ಲದ ಜಾಗಗಳಿಗೆ ಖಾತಾ ವಿತರಿಸುವ ಯೋಜನೆ ಜಾರಿಗೊಳಿಸಲಾಗಿದೆ ಎಂದರು.

ಭಾರತವನ್ನು ಜಗತ್ತಿನ ಅತ್ಯಂತ ಪ್ರಬುದ್ಧ, ಪ್ರಗತಿಪರ, ಭದ್ರ, ಬಲಿಷ್ಟ ರಾಷ್ಟ್ರವನ್ನಾಗಿ ರೂಪಿಸಲು ದೇಶಭಕ್ತಿ ಅಳವಡಿಸಿಕೊಳ್ಳುವ ಮೂಲಕ ನಾವೆಲ್ಲಾ ಒಂದಾಗಿ ಪ್ರಯತ್ನಿಸೋಣ. ಪ್ರೀತಿ-ವಿಶ್ವಾಸ ಹಂಚುವ ಮೂಲಕ ಜಿಲ್ಲೆಯನ್ನು ಅಭಿವೃದ್ಧಿ ಪಥದಲ್ಲಿ ಕೊಂಡೊಯ್ಯಲು ಎಲ್ಲರೂ ಸಹಕರಿಸಬೇಕು. ಮುಂದಿನ ದಿನಗಳಲ್ಲಿ ರಾಜ್ಯದ ಅಭಿವೃದ್ಧಿಗೆ ನಮ್ಮ ಸರ್ಕಾರ ಬದ್ದವಾಗಿದ್ದು, ಜನತೆಯ ಸಹಕಾರದೊಂದಿಗೆ ಪ್ರಗತಿಯನ್ನು ಸಾಧಿಸಲಿದೆ ಎಂದು ಅಭಿಮತ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಪೊಲೀಸ್, ಅರಣ್ಯ ಇಲಾಖೆ, ಗೃಹರಕ್ಷಕ ದಳ ಇಲಾಖೆ ಮತ್ತು ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಂದ ಸಮವಸ್ತ್ರದಲ್ಲಿ ಶಿಸ್ತುಬದ್ದ ಪಥಸಂಚಲನ ನಡೆಯಿತು.

ಗಣರಾಜ್ಯೋತ್ಸವದ ದಿನಾಚರಣೆ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನಿಸಿ, ಗೌರವಿಸಲಾಯಿತು.

ಬಳಿಕ ಶಾಲಾ ಶಿಕ್ಷಣ ಇಲಾಖೆಯ ವಿವಿಧ ಮಾಧ್ಯಮಿಕ ಮತ್ತು ಪ್ರೌಢ ಶಾಲೆಯ ವಿದ್ಯಾರ್ಥಿಗಳಿಂದ ಗಣರಾಜ್ಯೋತ್ಸವದ ನಿಮಿತ್ತ ಸಾಮೂಹಿಕ ನೃತ್ಯ, ದೇಶ ಭಕ್ತಿಗೀತೆ, ವೇಷಧಾರಿ ಒಳಗೊಂಡ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನೋಡುಗರ ಮನಸೂರೆಗೊಂಡವು.

ಈ ಸಂದರ್ಭದಲ್ಲಿ ಸಂಸದ ಈ.ತುಕಾರಾಮ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯುಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಪಾಲಿಕೆ ಉಪಮೇಯರ್ ಮುಬೀನಾ, ಬಳ್ಳಾರಿ ವಲಯ ಪೊಲೀಸ್ ಮಹಾನಿರೀಕ್ಷಕ ಡಾ.ಪಿ.ಎಸ್ ಹರ್ಷ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ ಪೆನ್ನೇಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಸಹಾಯಕ ಆಯುಕ್ತ ರಾಜೇಶ್.ಹೆಚ್.ಡಿ., ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ, ಡಿಎಂಎಫ್ ವಿಶೇಷಾಧಿಕಾರಿ ಲೋಕೇಶ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿ-ಸಿಬ್ಬಂದಿ ವರ್ಗ, ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.



ತುಂಗಭದ್ರಾ ಜಲಾಶಯಕ್ಕೆ ಕ್ರೆಸ್ಟ್‌ಗೇಟ್ ಅಳವಡಿಸಲು ನೀಡಲಾಗಿದ್ದ ಹಣ ಹಿಂದಕ್ಕೆ ಪಡೆದಿಲ್ಲ: ಸಚಿವ ಶಿವರಾಜ್ ತಂಗಡಗಿ

ಕೊಪ್ಪಳ,ಜ.28-

ತುಂಗಭದ್ರಾ ಜಲಾಶಯಕ್ಕೆ ಹೊಸ ಕ್ರೆಸ್ಟ್‌ಗೇಟ್ ಅಳವಡಿಸಲು ರಾಜ್ಯ ಸರಕಾರದಿಂದ ನೀಡಲಾಗಿದ್ದ ಅನುದಾನವನ್ನು ಹಿಂದಕ್ಕೆ ಪಡೆದಿಲ್ಲ. ಬಿಜೆಪಿ ನಾಯಕರು ಆಧಾರ ರಹಿತ ಹೇಳಿಕೆ ನೀಡಿದ್ದಾರೆ ಎಂದು ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ ಹೇಳಿದರು.


ನಗರದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಸಚಿವ ಶಿವರಾಜ್ ತಂಗಡಗಿ, ಹೊಸ ಕ್ರೆಸ್ಟ್‌ಗೇಟ್ ಅಳವಡಿಸುವ ಕಾಮಗಾರಿ ನಿಗದಿತ ಸಮಯದಲ್ಲಿ ಪೂರ್ಣಗೊಳ್ಳಲಿದೆ. ರಾಜ್ಯ ಸರಕಾರ ತನ್ನ ಪಾಲಿನ 10 ಕೋಟಿ ಹಿಂದಕ್ಕೆ ಪಡೆದಿಲ್ಲ. ಇದೆಲ್ಲ ಆಧಾರ ರಹಿತ ಹೇಳಿಕೆಗಳಾಗಿವೆ. ಹಣವನ್ನು ಹಿಂದಕ್ಕೆ ಪಡೆಯಲಾಗಿದ್ದರೆ ದಾಖಲೆಗಳನ್ನು ಕೊಡಲಿ ಎಂದು ಹೇಳಿದರು.

ಕೇಂದ್ರ ಸರಕಾರದಿಂದ ಪ್ರತಿವರ್ಷ ತುಂಗಭದ್ರಾ ಮಂಡಳಿಗೆ ಎಲ್ಲ ರಾಜ್ಯಗಳ ಪಾಲಿನ ಅನುದಾನ ಬರುತ್ತದೆ. ಅದೇ ಹಣದ ಬುಕ್ ಅಡ್ಜೆಸ್ಟ್‌ಮೆಂಟ್‌ನಿಂದ ಹಣ ಪಾವತಿಯಾಗುತ್ತದೆ. ಮೊದಲ ಬಾರಿಗೆ ಕರ್ನಾಟಕ 10 ಕೋಟಿ ಕೊಟ್ಟಿದೆ ಇದರ ಜೊತೆಗೆ ಆಂದ್ರ-ತೆಲಂಗಾಣ ರಾಜ್ಯಗಳು ತಮ್ಮ ಪಾಲಿನ ಹಣ ನೀಡಿವೆ ಎಂದು ಹೇಳಿದರು.

ಗೇಟ್‌ಗಳ ಅಳವಡಿಕೆ ಮಾಡಿದ ಗುತ್ತಿಗೆದಾರರಿಗೆ ಈಗಾಗಲೇ 11 ಕೋಟಿ ಪಾವತಿಸಲಾಗಿದ್ದು, ಇಂದು ಇನ್ನೂ 3.80 ಕೋಟಿ ನೀಡಲಾಗುವುದು. ಜಲಾಶಯಗಳ ಸುರಕ್ಷತಾ ತಜ್ಞ ಕನ್ನಯ್ಯ ನಾಯ್ಡು ಅವರಿಗೆ ಮಾಹಿತಿ ಕೊರತೆಯಿದೆ. ನಿಗದೀತ ಸಮಯದೊಳಗೆ ಕ್ರೆಸ್ಟ್‌ಗೇಟ್‌ಗಳ ಅಳವಡಿಕೆ ಕಾಮಗಾರಿ ಪೂರ್ಣಗೊಳ್ಳುತ್ತೆ ಎಂದರು.

ಈಗಾಗಲೇ 18ನೇ ಕ್ರೆಸ್ಟ್‌ಗೇಟ್ ಅಳವಡಿಸಲಾಗಿದೆ, ಇದೇ ತಿಂಗಳ 30ರ ಒಳಗೆ 4, 11, 19, 20 ಮತ್ತು 27 ಗೇಟ್ ಅಳವಡಿಕೆ ಮುಗಿಯಲಿದೆ ಈ ಕುರಿತು ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಜೊತೆಗೂ ಚರ್ಚಿಸಲಾಗುವುದು ಎಂದರು. ಇದರ ಕುರಿತು ಮಾಧ್ಯಮಗಳಿಗೆ ತಪ್ಪು ಮಾಹಿತಿ ನೀಡಿದ ಅಧಿಕಾರಿಗಳಿಗೆ ನೋಟಿಸ್ ನೀಡಲಾಗುವುದು ಎಂದು ಶಿವರಾಜ್ ತಂಗಡಗಿ ಹೇಳಿದರು.

77ನೇ ಗಣರಾಜ್ಯೋತ್ಸವ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ರಾಷ್ಟ್ರ ಧ್ವಜಾರೋಹಣವನ್ನು ನೆರವೇರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಎಲ್ಲಾ ಸಿಬ್ಬಂದಿ ವರ್ಗದವರು ಸೇರಿದಂತೆ ಇತರರು ಉಪಸ್ಥಿತರಿದ್ದರು.



ಒಂದನೇಯ ಪುಟದಿಂದ

ವಿಮಾನ ಅಪಘಾತದಲ್ಲಿ ಅಜಿತ್ ಪವಾರ್ ಸಾವು: ಸಿಎಂ, ಡಿಸಿಎಂ ಸೇರಿ ಗಣ್ಯರ ಸಂತಾಪ

ಸೇವೆ ಸಲ್ಲಿಸಿದರು. ಅವರ ಕುಟುಂಬ ಮತ್ತು ಬೆಂಬಲಿಗರಿಗೆ ನನ್ನ ಹೃತ್ಪೂರ್ವಕ ಸಂತಾಪಗಳು ಮತ್ತು ಈ ದುಃಖದ ಸಮಯದಲ್ಲಿ ಶಕ್ತಿಗಾಗಿ ಪ್ರಾರ್ಥಿಸುತ್ತೇನೆ'' ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಅಜಿತ್ ಪವಾರ್ ಅವರ ದುರಂತ ವಿಮಾನ ಅಪಘಾತದಲ್ಲಿ ಅಕಾಲಿಕ ನಿಧನದಿಂದ ಆಘಾತ ಮತ್ತು ತೀವ್ರ ದುಃಖವಾಗಿದೆ. ಅವರ ಹಠಾತ್ ನಿಧನವು ಸಾರ್ವಜನಿಕ ಜೀವನ ಮತ್ತು ಮಹಾರಾಷ್ಟ್ರ ರಾಜಕೀಯಕ್ಕೆ ದೊಡ್ಡ ನಷ್ಟವಾಗಿದೆ, ಅಲ್ಲಿ ಅವರು ಅನುಭವ ಮತ್ತು ದೃಢಸಂಕಲ್ಪದೊಂದಿಗೆ ಸೇವೆ ಸಲ್ಲಿಸಿದ್ದಾರೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರಾರ್ಥಿಸಿದ್ದಾರೆ.

ಬಾರಾಮತಿ ಬಳಿ ನಡೆದ ವಿಮಾನ ಅಪಘಾತದಲ್ಲಿ ಅಜಿತ್ ಪವಾರ್ ಅವರ ದುರಂತ ನಿಧನದಿಂದ ತೀವ್ರ ದುಃಖಿತನಾಗಿದ್ದೇನೆ ಎಂದು ಬಿಜೆಪಿ ರಾಜ್ಯ ಅಧ್ಯಕ್ಷ ಬಿ.ವೈ.ವಿಜಯೇಂದ್ರ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ಕುಟುಂಬ, ಹಿತೈಷಿಗಳು ಮತ್ತು ಬೆಂಬಲಿಗರಿಗೆ ನನ್ನ ಸಂತಾಪಗಳು. ಈ ದುರಂತ ಘಟನೆಯಲ್ಲಿ ಪ್ರಾಣ ಕಳೆದುಕೊಂಡ ಇತರ ಎಲ್ಲರ ಕುಟುಂಬಗಳಿಗೆ ನಾನು ಸಂತಾಪ ಸೂಚಿಸುತ್ತೇನೆ. ಅಗಲಿದ ಆತ್ಮಗಳಿಗೆ ಶಾಂತಿ ಸಿಗಲಿ ಎಂದು ತಿಳಿಸಿದ್ದಾರೆ.

ಈ ಕುರಿತಾಗಿ ಸದಾಶಿವನಗರದಲ್ಲಿರುವ ತಮ್ಮ ನಿವಾಸದ ಬಳಿ ಡಿಸಿಎಂ ಡಿ.ಕೆ.ಶಿವಕುಮಾರ್ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ ಅಜಿತ್ ಪವಾರ್ ಅವರ ಸಾವಿನ ಸುದ್ದಿ ಕೇಳಿ ನನಗೂ ಗಾಬರಿಯಾಯಿತು. ರಾಜಕಾರಣಿಗಳಾದ ನಾವುಗಳು ಅತ್ಯಂತ ಎಚ್ಚರಿಕೆಯಿಂದ ಇರಬೇಕು. ಆಚೀಚೆ ಪ್ರಯಾಣ ಮಾಡುವಾಗ ಹುಷಾರಾಗಿ ಇರಬೇಕು. ಹೀಗೆ ಅನೇಕ ನಾಯಕರನ್ನು ನಾವು ಕಳೆದುಕೊಂಡಿದ್ದೇವೆ ಎಂದು ತಿಳಿಸಿದರು.

ನಗರ ಸ್ಥಳೀಯ ಸಂಸ್ಥೆ, ಗ್ರಾ.ಪಂ.ಗಳಿಗೆ ಮೀಸಲು ನಿಗದಿ: ಉತ್ತರಿಸಲು ಸರಕಾರಕ್ಕೆ ಕೊನೇ ಅವಕಾಶ ನೀಡಿದ ಹೈಕೋರ್ಟ್

ಸರಕಾರದ ಪರ ವಕೀಲರ ಮನವಿ ಪರಿಗಣಿಸಿದ ನ್ಯಾಯಪೀಠ, ಅರ್ಜಿಗೆ ಕುರಿತು ಉತ್ತರಿಸಲು ಸರಕಾರಕ್ಕೆ ಅಂತಿಮ ಅವಕಾಶ ನೀಡಿ ವಿಚಾರಣೆಯನ್ನು ಫೆಬ್ರವರಿ 5ಕ್ಕೆ ಮುಂದೂಡಿತು.

ಚುನಾವಣಾ ಆಯೋಗದ ಮನವಿ ಏನು?

ರಾಜ್ಯದ ಗ್ರಾ.ಪಂ.ಗಳಿಗೆ 2020ರಲ್ಲಿ ಸಾರ್ವತ್ರಿಕ ಚುನಾವಣೆ ನಡೆದಿತ್ತು. ಅವುಗಳ ಅವಧಿ ಜನವರಿ ಅಂತ್ಯಕ್ಕೆ ಮುಕ್ತಾಯವಾಗಲಿದೆ. ಜೊತೆಗೆ, ಅವಧಿ ಪೂರ್ಣಗೊಂಡಿರುವ 187 ನಗರ ಸ್ಥಳೀಯ ಸಂಸ್ಥೆಗಳಿಗೂ (47 ನಗರಸಭೆ, 91 ಪುರಸಭೆ, 49 ಪಟ್ಟಣ ಪಂಚಾಯಿತಿ) ಚುನಾವಣೆ ನಡೆಸಬೇಕಿದೆ. ಮುಂದಿನ ಅವಧಿಗೆ ಹೊಸದಾಗಿ ಚುನಾವಣೆ ನಡೆಸಬೇಕಾದರೆ ಮೀಸಲಾತಿ ನಿಗದಿಯಾಗಬೇಕಿದ್ದು, ಮೀಸಲಾತಿ ನಿಗದಿಪಡಿಸುವುದು ರಾಜ್ಯ ಸರಕಾರದ ಜವಾಬ್ದಾರಿಯಾಗಿದೆ. ಅದೇ ರೀತಿ, ಚುನಾವಣೆ ನಡೆಸುವುದು ರಾಜ್ಯ ಚುನಾವಣಾ ಆಯೋಗದ ಹೊಣೆಗಾರಿಕೆಯಾಗಿದೆ. ಮೀಸಲಾತಿ ಅಂತಿಮಗೊಳ್ಳುವ ತನಕ ಚುನಾವಣಾ ದಿನಾಂಕ ಘೋಷಿಸಲು ಸಾಧ್ಯವಿಲ್ಲ. ಮೀಸಲಾತಿ ಅಧಿಸೂಚನೆ ಹೊರಡಿಸುವಂತೆ ರಾಜ್ಯ ಸರಕಾರಕ್ಕೆ ಹಲವು ಬಾರಿ ಮನವಿ ಮಾಡಿದರೂ, ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಆದ್ದರಿಂದ, ಸರಕಾರಕ್ಕೆ ಈ ನಿಟ್ಟಿನಲ್ಲಿ ಸೂಕ್ತ ನಿರ್ದೇಶನ ನೀಡಬೇಕು ಎಂದು ಚುನಾವಣಾ ಆಯೋಗ ಮನವಿ ಮಾಡಿದೆ.

ವಾರ್ತಾ ಇಲಾಖೆಯ ಮಾಹಿತಿ ಪ್ರದರ್ಶನ ಮಳಿಗೆಗೆ ಚಾಲನೆ

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಭೂಪನಗೌಡ ಕರಡಕಲ್, ಟಿಎಪಿಸಿಎಂಎಸ್‌ನ ಅಧ್ಯಕ್ಷರಾದ ಶಶಿಧರ ಪಾಟೀಲ, ಲಿಂಗಸೂರ ಕೇಂದ್ರ ಬಸ್ ನಿಲ್ದಾಣದ ಸಂಚಾರಿ ನಿಯಂತ್ರಕರಾದ ಸಂಗಪ್ಪ, ಸಾರಿಗೆ ನಿಯಂತ್ರಕರಾದ ಮೆಹಬೂಬಿ, ಬಸವಂತಪ್ಪ, ಅಮರಪ್ಪ, ಬಸಣ್ಣ ಸೇರಿದಂತೆ ಸಾರ್ವಜನಿಕರು, ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ಇತರರು ಇದ್ದರು.

ರಾಯಚೂರು ಉತ್ಸವ: ಆರ್‌ಟಿಪಿಎಸ್, ಕೆಪಿಸಿ ಡಿಎವಿ, ಬ್ಲೆಸ್ಡ್ ಆಲ್ಫೋನ್ಸಾ ಪ್ರೌಢಶಾಲೆಗಳಲ್ಲಿ ಪ್ರಚಾರ

ಈ ಸಂದರ್ಭದಲ್ಲಿ ಅರಣ್ಯ ಇಲಾಖೆಯ ನಾಗರಾಜ, ಗ್ರಂಥಾಲಯ ಇಲಾಖೆಯ ಮರೆಪ್ಪ ಸೇರಿದಂತೆ ಪ್ರಚಾರ ಸಮಿತಿಯ ಇನ್ನಿತರ ಸದಸ್ಯರು ಇದ್ದರು.

ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಪಂ ಸಿಇಓ ಈಶ್ವರ್ ಕಾಂದೂ ಸೂಚನೆ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಿರಲಿ

ಚಟುವಟಿಕೆಗೆ ಅಗತ್ಯ ಸಹಕಾರ ಒದಗಿಸಿದರೆ, ಮಹಿಳೆಯರು ಆರ್ಥಿಕವಾಗಿ ಸದೃಢರಾಗಲಿದ್ದಾರೆ ಎಂದರು.

ಕುಡಿಯುವ ನೀರು ಪೂರೈಕೆ, ಗ್ರಂಥಾಲಯ, ಬೀದಿ ದೀಪಗಳ ನಿರ್ವಹಣೆ, ಜಲ ಮೂಲಗಳ ಸ್ವಚ್ಛತೆ ಸೇರಿ ಇನ್ನಿತರ ಮೂಲ ಸೌಕರ್ಯಗಳ ಒದಗಿಸುವಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮುತುವರ್ಜಿ ವಹಿಸಿದರೆ ಸಾರ್ವಜನಿಕರಿಗೆ ಅನುಕೂಲವಾಗಲಿದೆ ಎಂದು ಸಿಇಓ ಅವರು ಸೂಚನೆ ನೀಡಿದರು.

ಈ ವೇಳೆ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ್, ತಾಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

ರಾಷ್ಟ್ರೀಯ ಹೆಣ್ಣು ಮಗು ಜಾಗೃತಿ ದಿನ ತಾಯಿ ಮಕ್ಕಳ ಆಸ್ಪತ್ರೆಗಳು ಮಹಿಳೆಯರ ಆರೋಗ್ಯ ಸುರಕ್ಷತೆಯ ಕೇಂದ್ರಗಳಾಗಿವೆ

ಕುಟುಂಬದಲ್ಲಿ ಹೆಣ್ಣು ಎಂಬ ಭೇದ ಮಾಡದೆ ಮಗಳಿಗೆ ಆರೋಗ್ಯ ಇಲಾಖೆಯಡಿ ಬಾಲ್ಯದಲ್ಲಿಯೇ ಸಂಪೂರ್ಣ ಲಸಿಕೆ, ಹದಿಹರೆಯದಲ್ಲಿ ರಕ್ತಹೀನತೆಯ ವಿಷಚಕ್ರ ಅಳಿಸಲು 'ಅನಿಮೀಯಾ ಮುಕ್ತ ಪೌಷ್ಟಿಕ ಕರ್ನಾಟಕ ಯೋಜನೆಯಡಿ ಕಬ್ಬಿಣಾಂಶ ಮಾತ್ರೆಗಳ ಒದಗಿಸುವಿಕೆ, ವೈಯಕ್ತಿಕ ಆರೋಗ್ಯಕ್ಕಾಗಿ ಶುಚಿ ನ್ಯಾಪ್‌ಕಿನ್‌ಗಳ ಪೂರೈಕೆ, ಸ್ನೇಹ ಕ್ಲಿನಿಕ್ ಮೂಲಕ ಹದಿಹರೆಯದ ಸಮಸ್ಯೆಗಳಿಗೆ ಸ್ಪಂದನೆ, ಮದುವೆಯನ್ನು 18 ವರ್ಷ ತುಂಬಿದ ನಂತರ, 20 ವರ್ಷಗಳ ನಂತರ ಗರ್ಭವತಿಯಾಗುವಿಕೆಯ ಮಹತ್ವ ಕುರಿತು ಜಾಗೃತಿ ನೀಡಲಾಗುತ್ತಿದೆ ಎಂದರು.

ಹೆಣ್ಣು ಭ್ರೂಣ ಹತ್ಯೆ ತಡೆಗೆ ನಿರಂತರ ನಿಗಾವಣೆ: ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಜಿಲ್ಲೆಯಾದ್ಯಂತ ಸ್ಕ್ಯಾನಿಂಗ್ ಸೆಂಟರ್‌ಗಳ ನಿಗಾವಣೆಯೊಂದಿಗೆ, ಹೆಣ್ಣು ಭ್ರೂಣ ಹತ್ಯೆ ತಡೆಗಟ್ಟುವಲ್ಲಿ ಆರೋಗ್ಯ ಇಲಾಖೆಯು ನಿರಂತರ ಜಾಗೃತಿ ಮೂಲಕ, ಪುರುಷ, ಸ್ತ್ರೀ ಅನುಪಾತದ ಸಮ ಪ್ರಮಾಣಕ್ಕಾಗಿ ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣಲಿಂಗ ಪತ್ತೆ ಕಾಯ್ದೆ 1994ಕ್ಕೆ ಬಲ ತುಂಬಿದ್ದು, ಭ್ರೂಣ ಹತ್ಯೆ ತಡೆಗೆ ಕಾನೂನಿನಡಿ ಕಠಿಣ ಕ್ರಮ ಕೈಗೊಳ್ಳಲಾಗಿದ್ದು, ಭ್ರೂಣ ಲಿಂಗ ಪತ್ತೆಗೆ ಮುಂದಾದವರ ಬಗ್ಗೆ ಮಾಹಿತಿ ಕೊಟ್ಟವರಿಗೆ ನೀಡುವ ಬಹುಮಾನವನ್ನು ರೂ 50 ಸಾವಿರದಿಂದ ರೂ 1 ಲಕ್ಷಕ್ಕೆ ಏರಿಕೆ ಮಾಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಎನ್‌ಪೋರ್ಸ್‌ಮೆಂಟ್ ಅಧಿಕಾರಿ ಡಾ.ಶಿವಕುಮಾರ ನಾರಾ, ತಾಲೂಕ ಆರೋಗ್ಯಾಧಿಕಾರಿ ಡಾ ಅಮೃತ ಹುಕ್ಕೇರಿ, ಎಮ್‌ಸಿಹೆಚ್ ಆಡಳಿತ ವೈದ್ಯಾಧಿಕಾರಿ ಡಾ ಪ್ರಜ್ವಲ್‌ಕುಮಾರ್, ಪ್ರಸೂತಿ ತಜ್ಞೆ ಡಾ.ಶಾಲಿನಿ, ಅರವಳಿಕೆ ತಜ್ಞ ಡಾ ಸರ್ಫರಾಜ್ ಖಾಜಿ, ಮಕ್ಕಳ ತಜ್ಞ ಡಾ ಮೋಹಿಜಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸ್ಸಯ್ಯ, ಮುಖ್ಯ ಶುಶ್ರೂಷಣಾಧಿಕಾರಿ ಸಲೋಮಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜ ಕೆ, ನಾಗರಾಜ್, ಹಿರಿಯ ಹೆಚ್‌ಐಓ ಸುರೇಶ, ಹಿರಿಯ ಪಿಹೆಚ್‌ಸಿಓ ಈರಮ್ಮ, ಪಿ.ಸಿ.ಪಿ.ಎನ್.ಡಿ.ಟಿ.ಯ ಅಮರೇಶ ಗಡ್ಡಿ, ಎಮ್‌ಟಿಎಸ್ ಸಂಧ್ಯಾ, ಎಫ್‌ಡಿಎ ರಾಘವೇಂದ್ರ, ಫಾರ್ಮಾಸಿ ಅಧಿಕಾರಿ ಖಾಜಾಪಾಶಾ, ಲೆಕ್ಕಪರಿಶೋಧಕ ತಿಮ್ಮರಾಜು ಸೇರಿದಂತೆ ತಾಯಂದಿರು, ಸಾರ್ವಜನಿಕರು ಉಪಸ್ಥಿತರಿದ್ದರು.

ಜಿಲ್ಲೆಯ ಎಲ್ಲ ಗ್ರಾಮಗಳು, ಹೋಬಳಿ, ತಾಲೂಕು ಕೇಂದ್ರಗಳಲ್ಲಿ ಉತ್ಸವದ ಬ್ಯಾನರ್ ಅಳವಡಿಸಿ ಪ್ರಚಾರ ನೀಡಲು ಸಿಇಓ ಸೂಚನೆ

ಬ್ಯಾನರನ್ನು ಅಳವಡಿಸುವ ಕಾರ್ಯವನ್ನು ಅತೀ ತುರ್ತಾಗಿ ಮಾಡಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಎಲ್ಲರೂ ಒಗ್ಗೂಡಿ ಉತ್ಸವವನ್ನು ಯಶಸ್ಸುಗೊಳಿಸಬೇಕು. ಉತ್ಸವದಲ್ಲಿ ಲೀಡ್ ಬ್ಯಾಂಕ್ ಸಹಕಾರದಲ್ಲಿ ಸ್ಟಾಲ್ ಸ್ಥಾಪಿಸಿ, ಕೇಂದ್ರ ಸರ್ಕಾರದ ಪಿಎಂಎಸ್ಬಿವೈ, ಪಿಎಂಜೆಜೆವೈ ವಿಮೆ ನೋಂದಣಿ ಮಾಡಲಾಗುವುದು. ಮುಖ್ಯವಾಗಿ ನಿರುದ್ಯೋಗಿ ಯುವಕರನ್ನು ನೋಂದಣಿ ಮಾಡುವ ಮೂಲಕ ಉದ್ಯೋಗ ಮೇಳ ಯಶಸ್ವಿಗೊಳಿಸಬೇಕು. ಪ್ರತಿ ತಾಲೂಕಿನಿಂದ ಪಂಚ ಗ್ಯಾರಂಟಿಗಳ ತಲಾ ಒಂದು ಯೋಜನೆಯ 25-30 ಫಲಾನುಭವಿಗಳನ್ನು ಕರೆ ತರಬೇಕು. ಸ್ವ ಸಹಾಯ ಗುಂಪುಗಳಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಸ್ಟಾಲ್ ವ್ಯವಸ್ಥೆ ಕಲ್ಪಿಸಲಾಗುವುದು. ಆಹಾರ ಮೇಳ, ಗೃಹ ಉತ್ಪನ್ನಗಳ ಮಾರಾಟಕ್ಕೆ ವಿವಿಧ ಜಿಲ್ಲೆಗಳು, ಅಂತರ ರಾಜ್ಯಗಳಿಂದ ವ್ಯಾಪಾರಸ್ಥರು ಆಗಮಿಸಲಿದ್ದಾರೆ ಎಂದು ಸಿಇಓ ಅವರು ಅಧಿಕಾರಿಗಳಿಗೆ ಮಾಹಿತಿ ನೀಡಿದರು.

ಈ ವೇಳೆ ಜಿಲ್ಲಾ ಪಂಚಾಯತ್‌ನ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ್, ತಾಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

ದಕ್ಷಿಣ ಭಾರತ ವಿಜ್ಞಾನ ಮೇಳ: ಶಿಕ್ಷಕ ಆನಂದ ಆಶ್ರಿತ್‌ಗೆ ವಿಶೇಷ ಬಹುಮಾನ



ಕೊಪ್ಪಳ,ಜ.28-

ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢ ವಿಭಾಗದ ಗಣಿತ ಶಿಕ್ಷಕ ಆನಂದ ಆಶ್ರಿತ್ ಅವರು ದಕ್ಷಿಣ ಭಾರತ ಮಟ್ಟದ ವಿಜ್ಞಾನ ಮೇಳದಲ್ಲಿ ವಿಶೇಷ ಬಹುಮಾನ ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ತೆಲಂಗಾಣ ರಾಜ್ಯದ ಸಂಗಾರೆಡ್ಡಿ ಜಿಲ್ಲೆಯ ಕೊಲ್ಲೂರು ತಾಲೂಕಿನ ಗಾಡಿಯಂ ಶಾಲೆಯಲ್ಲಿ ಜನವರಿ 19ರಿಂದ 23ರವರೆಗೆ ನಡೆದ ದಕ್ಷಿಣ ಭಾರತ ವಿಜ್ಞಾನ ಮೇಳದಲ್ಲಿ ಶಿಕ್ಷಕರ ವಿಭಾಗದಲ್ಲಿ ಅವರು ಭಾಗವಹಿಸಿದ್ದರು. ದಕ್ಷಿಣ ಭಾರತದ ಆರು ರಾಜ್ಯಗಳಿಂದ ಸುಮಾರು 60 ಶಿಕ್ಷಕರು ಈ ಮೇಳದಲ್ಲಿ ಪಾಲ್ಗೊಂಡಿದ್ದರು.

ಗಣಿತ ಶಿಕ್ಷಕರಾದ ಆನಂದ ಆಶ್ರಿತ್ ಅವರು ವೃತ್ತಗಳ ಪರಿಕಲ್ಪನೆಗೆ ಸಂಬಂಧಿಸಿದ ಪ್ರಮೇಯಗಳನ್ನು ಮಾದರಿ ರೂಪದಲ್ಲಿ ತಯಾರಿಸಿ ಪ್ರಸ್ತುತಪಡಿಸಿದ್ದು, ಅವರ ವಿಷಯ ನಿರೂಪಣೆ ಮತ್ತು ವೈಜ್ಞಾನಿಕ ದೃಷ್ಟಿಕೋನವನ್ನು ಮೆಚ್ಚಿ ನ್ಯಾಯಾಧೀಶರು ವಿಶೇಷ ಬಹುಮಾನಕ್ಕೆ ಆಯ್ಕೆ ಮಾಡಿದ್ದಾರೆ.

ಈ ಸಾಧನೆಗೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಸೋಮಶೇಖರಗೌಡ ಪಾಟೀಲ್, ಡಯಟ್ ಪ್ರಾಚಾರ್ಯರು, ನೋಡಲ್ ಅಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿ ಹನುಮಂತಪ್ಪ, ಉಪಪ್ರಾಂಶುಪಾಲ ವೀರಯ್ಯ ಸೂಡಿಮಠ್, ಎಸ್‌ಡಿಎಂಸಿ ಅಧ್ಯಕ್ಷ ಸಂಜೀವಮೂರ್ತಿ ಚೆನ್ನದಾಸರ್, ಹಾಗೂ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಸಂತಸ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಗಣರಾಜ್ಯೋತ್ಸವ ಆಚರಣೆ

ಬೀದರ, ಜ.28-

ರಾಷ್ಟ್ರದ ಏಕತೆ, ಸಮಾನತೆ, ಸಮೃದ್ಧಿ ಸಾಧಿಸುವಲ್ಲಿ ಪ್ರಜಾಪ್ರಭುತ್ವದ ಆದರ್ಶಗಳು ನಮ್ಮ ಹಾದಿಗೆ ಮಾರ್ಗದರ್ಶನ ನೀಡುತ್ತಲೇ ಇರಲೆಂದು ಬೀದರ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ. ಎಸ್.ವಿ. ಪಾಟೀಲ್ ಅವರು ಹೇಳಿದರು.

ಅವರು ಸೋಮವಾರ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆಯ ಅಧೀನದಲ್ಲಿರುವ ಬೀದರ ತೋಟಗಾರಿಕಾ ಮಹಾವಿದ್ಯಾಲಯದ ಆವರಣದಲ್ಲಿ 77ನೇ ಗಣರಾಜ್ಯೋತ್ಸವದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ದೇಶಭಕ್ತಿ ಮತ್ತು ಏಕತೆಯ ಮನೋಭಾವ ರಾಷ್ಟ್ರದ ಒಳಿತಿಗೆ ಕೊಡುಗೆ ನೀಡಲಿ, ಸುಭದ್ರ, ಸೌಹಾರ್ದ ಹಾಗೂ ಸಮೃದ್ಧ ಕರ್ನಾಟಕ, ಭಾರತ ನಿರ್ಮಿಸಲು ಸಂವಿಧಾನದ ಶಕ್ತಿ ಬಳಸಿಕೊಂಡು ಮುನ್ನಡೆಯೋಣ. ಮಾದರಿ ಪ್ರಜಾಪ್ರಭುತ್ವವನ್ನು ಇನ್ನಷ್ಟು ಶಕ್ತಗೊಳಿಸಿ ಅಭಿವೃದ್ಧಿಶೀಲ ರಾಷ್ಟ್ರದ ನಿರ್ಮಾಣಕ್ಕೆ ಹೊಸ ಪಣಗಳನ್ನು ತೊಡಬೇಕೆಂದು ಅಭಿಪ್ರಾಯವನ್ನು ವ್ಯಕ್ತ ಪಡಿಸಿದರು ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟದ ವಿದ್ಯಾರ್ಥಿಗಳು ಅತೀ ಹೆಚ್ಚು ಫೆಲೋಶಿಪ್ ಗಳಿಸುವುದರೊಂದಿಗೆ ಶಿಕ್ಷಣ ಕ್ಷೇತ್ರದಲ್ಲಿ ಅತ್ಯುನ್ನತ ಸಾಧನೆ ಮಾಡಿದ್ದಾರೆಂದು ಹರ್ಷವನ್ನು ವ್ಯಕ್ತಪಡಿಸುತ್ತಾ, ಸುಸಂಸ್ಕೃತ ವಿದ್ಯಾರ್ಥಿಗಳು ದೇಶದ ಘನತೆಯನ್ನು ಹೆಚ್ಚಿಸುವಲ್ಲಿ ಪ್ರಧಾನ ಪಾತ್ರವನ್ನು ವಹಿಸಬೇಕೆಂದು ಕಿವಿಮಾತನ್ನು ಹೇಳಿದರು.



ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟವು ಈಗಾಗಲೇ ರಾಷ್ಟ್ರ ಮಟ್ಟದಲ್ಲಿ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ತನ್ನದೆಯಾದ ಛಾಪು ಮೂಡಿಸಿದ್ದು, ಇನ್ನೂ ಹೆಚ್ಚು ಹೆಸರುವಾಸಿಯಾಗಲೂ ನಮ್ಮ ಮಹಾವಿದ್ಯಾಲಯದ 'ಬೋಧಕ', ಬೋಧಕೇತರ ಸಿಬ್ಬಂದಿಗಳು, ಕಾರ್ಮಿಕ ಬಂಧುಗಳು ಮತ್ತು ವಿದ್ಯಾರ್ಥಿಗಳು ಹೆಚ್ಚಿನ ಪರಿಶ್ರಮವನ್ನು ವಹಿಸಿ ದಕ್ಷ ಹಾಗೂ ಪ್ರಾಮಾಣಿಕವಾಗಿ ಕೆಲಸವನ್ನು ನಿರ್ವಹಿಸಬೇಕೆಂದು ಸಲಹೆ ನೀಡಿದರು.

ಈ ಕಾರ್ಯಕ್ರಮದಲ್ಲಿ ತೋಟಗಾರಿಕಾ ಮಹಾವಿದ್ಯಾಲಯದ ವಿದ್ಯಾರ್ಥಿಗಳು ರಾಷ್ಟ್ರೀಯ ಭಾವೈಕ್ಯತೆ ಸಾರುವ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಡಾ.ಮಹ್ಮದ್ ಫಾರೂಕ, ಡಾ. ವಿ.ಪಿ. ಸಿಂಗ್, ಡಾ.ವಿಜಯ ಮಹಾಂತೇಶ, ಶಿಕ್ಷಕ, ಶಿಕ್ಷಕೇತರ ನೌಕರರು, ವಿದ್ಯಾರ್ಥಿಗಳು ಸೇರಿದಂತೆ ಕಾರ್ಮಿಕ ವರ್ಗದವರು ಉಪಸ್ಥಿತರಿದ್ದರು.

ಸಂವಿಧಾನದಿಂದ ಸಮಾನತೆ: ಪ್ರೊ.ಎಂ ಮುನಿರಾಜು ಅಭಿಮತ

ಬಳ್ಳಾರಿ,ಜ.28-

ಸಂವಿಧಾನದ ಭದ್ರ ಅಡಿಪಾಯವಾದ ಕಾನೂನಿನ ಚೌಕಟ್ಟಿನಿಂದ ಇಂದು ದೇಶದ ನಾಗರಿಕರೆಲ್ಲ ಸಮಾನತೆಯಿಂದ ಬದುಕಲು ಸಾಧ್ಯವಾಗಿದೆ. ಗಣರಾಜ್ಯೋತ್ಸವಕ್ಕಾಗಿ ಶ್ರಮಿಸಿದ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಮತ್ತು ತಂಡವನ್ನು ನಾವೆಲ್ಲರೂ ಸ್ಮರಿಸಬೇಕು ಎಂದು ವಿವಿಯ ಕುಲಪತಿ ಪ್ರೊ.ಎಂ ಮುನಿರಾಜು ಹೇಳಿದರು.

77ನೇ ಗಣರಾಜ್ಯೋತ್ಸವದ ಅಂಗವಾಗಿ ವಿಶ್ವವಿದ್ಯಾಲಯದಲ್ಲಿ ಧ್ವಜಾರೋಹಣ ಕಾರ್ಯಕ್ರಮ ನೆರವೇರಿಸಿ ಅವರು ಮಾತನಾಡಿದರು.

ಸಂವಿಧಾನದ ನೆಲೆಗಟ್ಟಿನಲ್ಲಿ ವಿವಿಯ ವಿದ್ಯಾರ್ಥಿಗಳಿಗೆ ಮೂಲ ಸೌಕರ್ಯಗಳನ್ನು ಒದಗಿಸಲಾಗುವುದು. ಈ ನಿಟ್ಟಿನಲ್ಲಿ ಸ್ಮಾರ್ಟ್ ಕ್ಲಾಸ್ ರೂಮ್, ಸುಸಜ್ಜಿತ ಗ್ರಂಥಾಲಯ, ಗುಣಮಟ್ಟದ ಆಹಾರ ಸೌಲಭ್ಯ ಒದಗಿಸಲು ಹಂತ-ಹಂತವಾಗಿ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದರು.



ಕಲ್ಯಾಣ-ಕರ್ನಾಟಕ ಭಾಗದ ವಿದ್ಯಾರ್ಥಿಗಳು ಉದ್ಯಮಶೀಲರಾಗಲು ಬೇಕಿರುವ ಕೌಶಲ್ಯಾಧಾರಿತ ಶಿಕ್ಷಣ ನೀಡಲು ವಿವಿಯ ಎಲ್ಲ ಸಿಬ್ಬಂದಿ ಶ್ರಮಿಸಬೇಕು ಎಂದು ಕರೆ ನೀಡಿದರು.

ವಿಶ್ವವಿದ್ಯಾಲಯದಲ್ಲಿ ಒಳಾಂಗಣ ಮತ್ತು ಹೊರಾಂಗಣ ಕ್ರೀಡಾಂಗಣ ನಿರ್ಮಿಸಲು ಸರ್ಕಾರಕ್ಕೆ ಮನವಿ ಸಲ್ಲಿಸಿದ್ದು, ಆದಷ್ಟು ಬೇಗ ನಿರ್ಮಿಸಲಾಗುವುದು ಎಂದು ಕುಲಪತಿಗಳು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬಳ್ಳಾರಿಯ ಎನ್‌ಸಿಸಿ ಬಟಾಲಿಯನ್ ಎನ್ ಬಿ ಸುಬೇದಾರ್ ಹರಿಂದರ್ ಸಿಂಗ್ ಅವರು ಮಾತನಾಡಿ, ವಿಶ್ವದಲ್ಲಿಯೇ ಬೃಹತ್ ಸಂವಿಧಾನ ನಮ್ಮದು. ಎಲ್ಲ ಧರ್ಮಗಳಿಗೂ ಸಂವಿಧಾನದಲ್ಲಿ ಸಮಾನ ಸ್ಥಾನಮಾನ ನೀಡಲಾಗಿದೆ. ವಿವಿಯ ವಿದ್ಯಾರ್ಥಿಗಳು ಎನ್‌ಸಿಸಿ ಘಟಕಗಳಿಗೆ ಸೇರಿ ನಿಗದಿತ ಪ್ರಮಾಣಪತ್ರಗಳನ್ನು ಪಡೆದುಕೊಂಡು ಸರ್ಕಾರಿ ಹುದ್ದೆಗಳಲ್ಲಿ ಮೀಸಲಿರುವ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಗಣರಾಜ್ಯೋತ್ಸವ ದಿನದಂದು ವಿವಿಯಲ್ಲಿ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗಾಗಿ ವ್ಯಾಯಾಮ ಕೇಂದ್ರಗಳು (ಜಿಮ್) ಹಾಗೂ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಲೋಕಾರ್ಪಣೆಗೊಳಿಸಲಾಯಿತು.

ಕುಲಸಚಿವ ಪ್ರೊ.ತಿಪ್ಪೇರುದ್ರಪ್ಪ.ಜೆ ಅತಿಥಿಗಳನ್ನು ಸ್ವಾಗತಿಸಿದರು. ಪರೀಕ್ಷಾಂಗ ಕುಲಸಚಿವ ಪ್ರೊ.ಎನ್.ಎಂ ಸಾಲಿ, ಸಿಂಡಿಕೇಟ್ ಸದಸ್ಯರಾದ ರಮೇಶ್ ಸವದಿ, ಶಿವಕುಮಾರ್, ಕ್ರೀಡಾ ವಿಭಾಗದ ನಿರ್ದೇಶಕ ಡಾ.ಶಶಿಧರ್ ಕೆಲ್ಲೂರ್ ವೇದಿಕೆಯಲ್ಲಿದ್ದರು.

ವಿವಿಯ ವಿವಿಧ ನಿಕಾಯದ ಡೀನರು, ವಿಭಾಗಗಳ ಮುಖ್ಯಸ್ಥರು, ಬೋಧಕ-ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು.

ಹೆಣ್ಣು ಮಕ್ಕಳ ಶಿಕ್ಷಣ, ಆರೋಗ್ಯ ಬಗ್ಗೆ ಜಾಗೃತಿ ಅಗತ್ಯ : ಡಾ.ಶಂಕ್ರಪ್ಪ ಮೈಲಾರಿ



ಕಲಬುರಗಿ,ಜ.28-

ಸಮಾಜದಲ್ಲಿ ಹೆಣ್ಣು ಮಕ್ಕಳು ಎದುರಿಸುತ್ತಿರುವ ಅಸಮಾನತೆಗಳು, ಮಕ್ಕಳ ಹಕ್ಕುಗಳು, ಶಿಕ್ಷಣ ಆರೋಗ್ಯ ಮತ್ತು ಪೋಷಣೆಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ವಿಭಾಗೀಯ ಜಂಟಿ ನಿರ್ದೇಶಕರ ಕಾರ್ಯಾಲಯದ ಕಲಬುರಗಿಯ ವಿಭಾಗೀಯ ಸಹ ನಿರ್ದೇಶಕ ಡಾ.ಶಂಕ್ರಪ್ಪ ಮೈಲಾರಿ ಹೇಳಿದರು.

ನಗರದ ಜಿಮ್ಸ್ ವೈದ್ಯಕೀಯ ವಿಜ್ಞಾನಗಳ ಮಹಾವಿದ್ಯಾಲಯ ಸಂಸ್ಥೆ ಆಸ್ಪತ್ರೆಯ ಮೂರನೇ ಮಹಡಿ, ಪಿ ಎನ್ ಸಿ ವಾರ್ಡ್ ನಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸಕ್ಷಮ ಪ್ರಾಧಿಕಾರ ಪಿಸಿಪಿಎನ್‌ಡಿಟಿ ಕಾಯ್ದೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಮ್ಸ್ ಜಿಲ್ಲಾ ಆಸ್ಪತ್ರೆ ಕಲಬುರಗಿ ಸಹಯೋಗದಲ್ಲಿ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಉಜ್ವಲ ಭವಿಷ್ಯಕ್ಕಾಗಿ ಹೆಣ್ಣು ಮಕ್ಕಳನ್ನು ಸಬಲೀಕರಣಗೊಳಿಸುವುದು ಎಂಬುದು ಪ್ರಸಕ್ತ ಸಾಲಿನ ಘೋಷವಾಕ್ಯವಾಗಿದೆ. ಇಂದು ಹೆಣ್ಣುಮಕ್ಕಳು ಸಂಸಾರವನ್ನು ನಿಭಾಯಿಸುವುದರ ಜೊತೆಗೆ ಎಲ್ಲಾ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು.

ಪೌರ ಕಾರ್ಮಿಕರಿಗೆ ಸ್ವಚ್ಛತೆಯ ಪಾಠ ಮಾಡಿದ ಆಯುಕ್ತರು ಉತ್ಸವದಲ್ಲಿ ರಾಯಚೂರು ಸಿಟಿ ಸುಂದರವಾಗಿ ಕಾಣಲಿ: ಜುಬಿನ್ ಮೊಹಪಾತ್ರ

ಪ್ರಮುಖವಾಗಿ ಮುಖ್ಯ ರಸ್ತೆಗಳು, ಮುಖ್ಯ ರಸ್ತೆಗಳಲ್ಲಿರುವ ರಾಜ ಕಾಲುವೆಗಳಿಂದ ದುರ್ವಾಸನೆ ಬೀರದಂತೆ ಬ್ಲೀಚಿಂಗ್ ಪೌಡರ್ ಸಿಂಪಡಣೆ ಮಾಡಬೇಕು. ಯಾವುದೇ ಕಡೆಗಳಲ್ಲಿ ಕಸ ಕಾಣಿಸಬಾರದು. ಉತ್ಸವ ಕಾರ್ಯಕ್ರಮಗಳು ನಿಗದಿಯಾದ ಶ್ರೀ ಪಂಡಿತ ಸಿದ್ದರಾಮ ಜಂಬಲದಿನ್ನಿ ಜಿಲ್ಲಾ ರಂಗಮದಿರ, ಜೈಲ್ ಖಾನ್ ಬಳಿಯ ಮಹಿಳಾ ಸಮಾಜ ಆವರಣ, ಕೃಷಿ ವಿಜ್ಞಾನ ವಿಶ್ವವಿದ್ಯಾಲಯ, ವಾಲ್‌ಕಟ್ ಮೈದಾನ, ಜಿಲ್ಲಾ ಕ್ರೀಡಾಂಗಣದ ಒಳಾಂಗಣ ಮತ್ತು ಹೊರಾಂಗಣದಲ್ಲಿ ಈಗಿನಿಂದಲೇ ಶುಚಿತ್ವ ಕಾರ್ಯ ನಡೆಯಬೇಕು. ಈ ಎಲ್ಲ ಕಡೆಗೆ ಸಹ ಪ್ರತಿ ದಿನ ಶುಚಿತ್ವ ಕಾರ್ಯವಾಗಬೇಕು ಎಂದು ಆಯುಕ್ತರು ಸೂಚನೆ ನೀಡಿದರು. ಬೇರೆ ಬೇರೆ ಕಡೆಗಳಲ್ಲಿ ಫಾಗಿಂಗ್ ಮಾಡಬೇಕು. ಎಲ್ಲೆಂದರಲ್ಲಿ ಕಸ ಎಸೆಯದಂತೆ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಮೈಸೂರು, ಮಂಗಳೂರು ಸೇರಿದಂತೆ ಕೆಲ ನಗರಗಳು ಸ್ವಚ್ಛತೆಗೆ ಹೆಸರುವಾಸಿಯಾಗಿದೆ. ಅವುಗಳ ಸಾಲಿನಲ್ಲಿ ರಾಯಚೂರು ಸಹ ಸೇರುವ ಹಾಗೆ ರಾಯಚೂರನ್ನು ಸ್ವಚ್ಛ ನಗರವೆಂದು ತೋರಿಸಿಕೊಡಲು ರಾಯಚೂರು ಉತ್ಸವ ಒಂದು ಅವಕಾಶವಾಗಿದ್ದು, ಇದನ್ನು ಸವಾಲಾಗಿ ಸ್ವೀಕರಿಸಿ ಕೆಲಸ ಮಾಡಬೇಕು. ಪ್ರತಿಯೊಬ್ಬರು ಸ್ವಚ್ಛತೆಯ ಕಾರ್ಯವನ್ನು ನಮ್ಮ ಮನೆಯ ಕೆಲಸವೆಂದು ಭಾವಿಸಿ ಜವಾಬ್ದಾರಿ ತೆಗೆದುಕೊಳ್ಳಬೇಕು. ಆಗ ಮಾತ್ರ ಸ್ವಚ್ಛ ನಗರ ಸಾಲಿನಲ್ಲಿ ನಮ್ಮ ಜಿಲ್ಲೆ ಗುರುತಿಸಲು ಸಾಧ್ಯವಾಗುತ್ತದೆ ಎಂದರು.

ಪೌರ ಕಾರ್ಮಿಕರ ಮೇಲೆ ಸರಿಯಾಗಿ ಮೇಲ್ವಿಚಾರಣೆ ಮಾಡಲು ಇದೆ ವೇಳೆ ಆಯುಕ್ತರು, ಪಾಲಿಕೆಯ ಪರಿಸರ ಅಭಿಯಂತರರು ಮತ್ತು ಪರಿಸರ ನಿರೀಕ್ಷರಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಪರಿಸರ ವಿಭಾಗದ ಅಭಿಯಂತರರಾದ ಜೈಪಾಲ್ ರೆಡ್ಡಿ, ಉಪ ಆಯುಕ್ತರಾದ ಮಲ್ಲಿಕಾರ್ಜುನ ಸೇರಿದಂತೆ ಪೌರ ಕಾರ್ಮಿಕರು, ಪಾಲಿಕೆಯ ವಿವಿಧ ಅಧಿಕಾರಿಗಳು ಇದ್ದರು.



ಬ್ರಿಮ್ಸ್‌ನಲ್ಲಿ ಭ್ರಷ್ಟಾಚಾರ, ಅವ್ಯವಸ್ಥೆ ಖಂಡಿಸಿ ಮುತ್ತಿಗೆ : ಬಾಕಿ ವೇತನ ತಕ್ಷಣ ಬಿಡುಗಡೆಗೆ ಒತ್ತಾಯ

ಬೀದರ್ ,ಜ.28-

ನಗರದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಬ್ರಿಮ್ಸ್) ನಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ, ಆಡಳಿತಾತ್ಮಕ ಅವ್ಯವಸ್ಥೆ ಹಾಗೂ ನೌಕರರ ಬಾಕಿ ವೇತನ ಬಿಡುಗಡೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳಿಂದ ಮಂಗಳವಾರ ಬ್ರಿಮ್ಸ್ ಆಸ್ಪತ್ರೆಗೆ ಮುತ್ತಿಗೆ ಹಾಕಲಾಯಿತು.

ಜಿಲ್ಲಾಧಿಕಾರಿಗಳ ಮುಖಾಂತರ ವೈದ್ಯಕೀಯ ಶಿಕ್ಷಣ ಸಚಿವರಿಗೆ ಸಲ್ಲಿಸಿದ ಮನವಿ ಪತ್ರದಲ್ಲಿ, ಬ್ರಿಮ್ಸ್ ಆಸ್ಪತ್ರೆಯಲ್ಲಿ ಅಕ್ರಮವಾಗಿ ಹುದ್ದೆ ವಹಿಸಿಕೊಂಡಿರುವ ಅಧಿಕಾರಿಗಳಿಂದ ಸಂಸ್ಥೆಗೆ ಭಾರಿ ಆರ್ಥಿಕ ನಷ್ಟ ಉಂಟಾಗಿದ್ದು, ಕಳೆದ 10 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಸುಮಾರು 300ಡಿ ಮತ್ತು ಸಿ ಗ್ರೂಪ್ ನೌಕರರ ಆರು ತಿಂಗಳ ವೇತನ ಬಾಕಿಯಾಗಿದೆ ಎಂದು ಆರೋಪಿಸಲಾಗಿದೆ.

ಇತ್ತೀಚೆಗೆ ಯಾವುದೇ ನೋಟಿಸ್ ನೀಡದೆ 40 ಗುತ್ತಿಗೆ ವೈದ್ಯರನ್ನು ವಜಾಗೊಳಿಸಿರುವುದು ಖಂಡನೀಯವಾಗಿದೆ. ಅಕ್ರಮವಾಗಿ ಹುದ್ದೆ ಪಡೆದ ಅಧಿಕಾರಿಗಳ ವಿರುದ್ಧ ತನಿಖೆ ನಡೆಸಿ ಸೇವೆಯಿಂದ ವಜಾಗೊಳಿಸಬೇಕು. ತಪ್ಪಿತಸ್ಥರಿಂದ ನಷ್ಟ ವಸೂಲಿ ಮಾಡಬೇಕು. ಎಲ್ಲಾ ನೌಕರರ ಬಾಕಿ ವೇತನ ತಕ್ಷಣವೇ ಬಿಡುಗಡೆಗೊಳಿಸಿ, ಸೇವೆ ಖಾಯಂಗೊಳಿಸಬೇಕು ಎಂದು ಆಗ್ರಹಿಸಲಾಗಿದೆ. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ವಿಭಾಗೀಯ ಸಂಚಾಲಕರ ಉಮೇಶಕುಮಾರ್ ಸೊರಳ್ಳಿಕರ್, ವೀರ ಕನ್ನಡಿಗರ ಸೇನೆಯ ರಾಜ್ಯ ಸಂಚಾಲಕ ಡಾ. ಸುಬ್ಬಣ್ಣ ಕರಕನಳ್ಳಿ, ಅಶೋಕ್ ಸಂಗಮ್, ಗೌತಮ್ ಚೌಹ್ವಾಣ, ವಿಜಯಕುಮಾರ್ ಬಡಿಗೇರ್, ರುಕ್ಮೀಣಿ ಜೀರ್ಗೆ, ಜೈಭೀಮ್ ಶರ್ಮಾ, ವಿಜಯ ಕುಮಾರ್ ಸಾಮ್ರಾಟ್, ತುಕರಾಮ್ ಭೂರೆ, ಬಾಬುರಾವ್ ಕೌಠಾ(ಬಿ), ದೇವರಾಜ್ , ಸಿದ್ದಾರ್ಥ , ಪ್ರಕಾಶ್ ಬಂಗಾರೆ, ರಂಜೀತ್ ವರ್ಮಾ, ಪ್ರಕಾಶ್ ಚಿಕ್ಕಪೇಟ್ ಹಾಗೂ ಸಂದೀಪ್ ಕಟ್ಟಿಮನಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ರಾಜ್ಯ ಪೊಲೀಸ್ ವ್ಯವಸ್ಥೆ ಕೆಡಲು ಕಾರಣರಾರು?



ಪೊಲೀಸ್ ಅಧಿಕಾರಿಗಳೇ ಅಪರಾಧಿಗಳಾಗುತ್ತಿರುವುದು ನಾಚಿಕೆಗೇಡಿನ ಸಂಗತಿ ಎಂದಿದ್ದಾರೆ ಮುಖ್ಯಮಂತ್ರಿಗಳು. ಅಧಿಕಾರಿಗಳನ್ನು ಕುರಿತು ಅಧಿಕಾರಸ್ಥರು ಈ ರೀತಿ ನಿಷ್ಠುರವಾಗಿ ಮಾತನಾಡಿದ್ದನ್ನು ಇತ್ತೀಚಿನ ದಿನಗಳಲ್ಲಿ ಕಂಡಿದ್ದಿಲ್ಲ. ಇಂತಹ ಖಡಕ್ ಮಾತುಗಳು ಬರುವುದರಲ್ಲಿ ತಪ್ಪಿಲ್ಲ. ಆದರೆ, ತಪ್ಪು ಎಲ್ಲಿಂದ ಎನ್ನುವುದನ್ನೂ ನೋಡಬೇಕಾಗುತ್ತದೆ.

ಸಾರ್ವಜನಿಕ ಸುವ್ಯವಸ್ಥೆ ಮತ್ತು ಸುರಕ್ಷತೆಯನ್ನು ಕಾಪಾಡುವುದು ಪೊಲೀಸರ ಮುಖ್ಯ ಕರ್ತವ್ಯ. ಕಾನೂನನ್ನು ಜಾರಿಗೊಳಿಸುವ, ಅಪರಾಧ ಚಟುವಟಿಕೆಗಳನ್ನು ತಡೆಗಟ್ಟುವ, ಪತ್ತೆಹಚ್ಚುವ ಮತ್ತು ತನಿಖೆ ಮಾಡುವ ಮಹತ್ವದ ಜವಾಬ್ದಾರಿಯನ್ನು ಪೊಲೀಸರು ಹೊಂದಿರುತ್ತಾರೆ. ಇವರು ಸರ್ಕಾರದ ನಾಗರಿಕ ಅಧಿಕಾರವನ್ನು ಪ್ರತಿನಿಧಿಸುವ ಅಧಿಕಾರಿಗಳಾಗಿರುತ್ತಾರೆ. ಸರ್ಕಾರದ- ಆಡಳಿತದ ಪ್ರತಿಫಲನವಾಗಿರುತ್ತಾರೆ.

ಆದರೆ ಇಂದಿನ ಪೊಲೀಸರು ಸಾರ್ವಜನಿಕರ ಸುವ್ಯವಸ್ಥೆ ಕಾಪಾಡುವುದಿರಲಿ, ಅಪರಾಧ ಚಟುವಟಿಕೆಗಳನ್ನು ತಡೆಗಟ್ಟುವುದಿರಲಿ, ಅವರೇ ಅಪರಾಧಿಗಳಾಗಿ ಮಾರ್ಪಾಡಾಗಿದ್ದಾರೆ.

ಇತ್ತೀಚೆಗೆ ಹಿರಿಯ ಪೊಲೀಸ್ ಅಧಿಕಾರಿಗಳ ಸಭೆಯಲ್ಲಿ ಪಾಲ್ಗೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಕಳೆದ ವರ್ಷ 88 ಪೊಲೀಸ್ ಅಧಿಕಾರಿಗಳ ಮೇಲೆ ಕ್ರಿಮಿನಲ್ ಮೊಕದ್ದಮೆಗಳು ದಾಖಲಾಗಿರುವುದು ನಾಚಿಕೆಗೇಡು ಎಂದರು. ಈ ಮಾತುಗಳನ್ನು ಮುಖ್ಯಮಂತ್ರಿಗಳು ಬಹಳ ಬೇಸರದಿಂದಲೇ ನುಡಿದಿದ್ದರು. ಅಷ್ಟೇ ಅಲ್ಲ, ಸ್ಥಳೀಯ ಪೊಲೀಸರ ಕಣ್ಣು ತಪ್ಪಿಸಿ ಮೈಸೂರು ಮತ್ತು ಬೆಂಗಳೂರಿನಲ್ಲಿ ನಡೆಯುತ್ತಿದ್ದ ಮಾದಕ ವಸ್ತುಗಳ ದಂಧೆಯನ್ನು ಮಹಾರಾಷ್ಟ್ರ ಪೊಲೀಸರು ಪತ್ತೆಹಚ್ಚಿರುವುದರ ಬಗ್ಗೆ ಮುಜುಗರ ವ್ಯಕ್ತಪಡಿಸಿದ್ದರು.

ಸಾಮಾನ್ಯವಾಗಿ ಅಧಿಕಾರಿಗಳನ್ನು ಕುರಿತು ಅಧಿಕಾರಸ್ಥರು ಈ ರೀತಿ ನಿಷ್ಠುರವಾಗಿ ಮಾತನಾಡಿದ್ದನ್ನು ಇತ್ತೀಚಿನ ದಿನಗಳಲ್ಲಿ ಕಂಡಿದ್ದಿಲ್ಲ, ಕೇಳಿದ್ದೂ ಇಲ್ಲ. ಹಾಗೆ ಮಾತನಾಡಿದ್ದಾರೆಂದರೆ, ಅದು ಸಾಮಾನ್ಯ ಸಂಗತಿಯಲ್ಲ. ಪೊಲೀಸ್ ಇಲಾಖೆ ಹೀಗಾಗಿದೆ ಎಂದರೆ, ಅದು ಸರ್ಕಾರ ಮತ್ತು ಆಡಳಿತದ ಮೇಲೆ ಪರಿಣಾಮ ಬೀರದೇ ಇರುವುದಿಲ್ಲ. ಪರಿಣಾಮ ಬೀರುವಂತಿದ್ದರೆ, ಅದು ಸರ್ಕಾರಕ್ಕೆ ಕೆಟ್ಟ ಹೆಸರು ತರುವಂತಿದ್ದರೆ, ಮುಖ್ಯಮಂತ್ರಿಗಳಿಂದ ಇಂತಹ ಖಡಕ್ ಮಾತುಗಳು ಬರುವುದರಲ್ಲಿ ತಪ್ಪಿಲ್ಲ.

ಆದರೆ, ತಪ್ಪು ಎಲ್ಲಿಂದ ಎನ್ನುವುದನ್ನೂ ನೋಡಬೇಕಾಗುತ್ತದೆ. ಅದಕ್ಕೆ ತಕ್ಕ ಮುಲಾಮನ್ನೂ ಹಚ್ಚಬೇಕಾಗುತ್ತದೆ. ಆಗ ಮುಖ್ಯಮಂತ್ರಿಗಳ ಮಾತಿಗೆ ತೂಕ ಬರುತ್ತದೆ.

ಸಿದ್ದರಾಮಯ್ಯನವರು ವಿರೋಧ ಪಕ್ಷದ ನಾಯಕರಾಗಿದ್ದಾಗ 40 ಪರ್ಸೆಂಟ್ ಸರ್ಕಾರ, ಪೇಟಿಎಂ ಸರ್ಕಾರ, ಭ್ರಷ್ಟ ಸರ್ಕಾರ ಎಂದು ದೊಡ್ಡದನಿಯಲ್ಲಿ ಬಿಜೆಪಿ ಸರ್ಕಾರವನ್ನು ಟೀಕಿಸಿದ್ದರು. ಅದನ್ನೇ ಜನರ ಮುಂದಿಟ್ಟು ಜನಾಭಿಪ್ರಾಯ ರೂಪಿಸಿದ್ದರು. ಜನ ಬಿಜೆಪಿಯನ್ನು ತಿರಸ್ಕರಿಸುವಂತೆ, ಕಾಂಗ್ರೆಸ್ಸ ನ್ನು ಅಧಿಕಾರಕ್ಕೆ ತರುವಂತೆ ನೋಡಿಕೊಂಡಿದ್ದರು.

ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಕೂಡ ಈಗ ಅದೇ ಹಾದಿಯಲ್ಲಿದೆ ಎಂಬ ಆರೋಪ ಕೇಳಿಬರುತ್ತಿದೆ. ಸದ್ಯದ ಕೆಲ ಘಟನೆಗಳು ಮತ್ತು ಮುಖ್ಯಮಂತ್ರಿಗಳ ಮಾತುಗಳು ಅದನ್ನು ಸಾಬೀತುಪಡಿಸುತ್ತಿವೆ. ಬಿಜೆಪಿ ಸರ್ಕಾರವನ್ನು 40 ಪರ್ಸೆಂಟ್ ಸರ್ಕಾರ ಎಂದಿದ್ದ ಗುತ್ತಿಗೆದಾರರ ಸಂಘದ ಪದಾಧಿಕಾರಿಗಳೇ, 40 ಪರ್ಸೆಂಟ್ ಮೀರಿದ ಕಾಂಗ್ರೆಸ್ ಸರ್ಕಾರವನ್ನೂ ಭ್ರಷ್ಟ ಸರ್ಕಾರ ಎಂದು ಕರೆದಿದ್ದಾರೆ. ಹೀಗೆ ಕರೆಯಲು ಕಾರಣಗಳು ಏನು ಎನ್ನುವುದನ್ನು ಕೆದಕಿದರೆ, ಅಲ್ಲಿ ಅಧಿಕಾರಿಗಳು ಕಾಣುತ್ತಾರೆ. ಆಯಕಟ್ಟಿನ ಜಾಗಕ್ಕಾಗಿ ಕಾತರಿಸುವ ಅಧಿಕಾರಿಗಳನ್ನು ತಡವಿದರೆ, ಅಲ್ಲಿ ಅಧಿಕಾರಸ್ಥರು ಕಾಣುತ್ತಾರೆ. ವರ್ಗಾವಣೆ ಎನ್ನುವುದು ಕಾಂಗ್ರೆಸ್ ಆಡಳಿತದಲ್ಲಿ ದಂಧೆಯ ರೂಪ ಪಡೆದಿರುವುದನ್ನು ಅಧಿಕಾರಿಗಳೇ ಹೇಳುತ್ತಾರೆ.

ಅದರಲ್ಲೂ ಪೊಲೀಸ್ ಇಲಾಖೆ, ಅಪರಾಧಗಳ ವ್ಯಾಪ್ತಿ ದಿನದಿಂದ ದಿನಕ್ಕೆ ವಿಸ್ತಾರವಾಗುತ್ತ ಹೋಗುತ್ತಿದೆ. ಪೆಟ್ಟಿ ಅಂಗಡಿ ಮುಂದೆ ನಿಂತು ಸಿಗರೇಟ್ ಸೇದುವವರಿಂದ ಹಿಡಿದು ಡಿಜಿಟಲ್ ಅರೆಸ್ಟ್‌ವರೆಗಿನ ಪಾತಕ ಕೃತ್ಯಗಳವರೆಗೆ, ಪ್ರತಿದಿನ ಅಪರಾಧಗಳ ಪಟ್ಟಿ ಬೆಳೆದು ಬೆಟ್ಟವಾಗುತ್ತಿದೆ. ಜನಸಾಮಾನ್ಯರು ಪೊಲೀಸ್ ಠಾಣೆ ಮೆಟ್ಟಿಲು ಹತ್ತುವುದಕ್ಕೆ ಹೆದರುತ್ತಿದ್ದಾರೆ. ಜನರ ಸಮಸ್ಯೆಗಳೇ ಪೊಲೀಸರಿಗೆ ಸಂಪಾದನೆಯ ಸುಲಲಿತ ಮಾರ್ಗ ಎಂಬಂತಾಗಿದೆ. ಹಣದ ಹರಿದಾಟ ಹೆಚ್ಚಾದಂತೆಲ್ಲ ಆಯಕಟ್ಟಿನ ಜಾಗ ಹಿಡಿಯಲು ಪೊಲೀಸ್ ಅಧಿಕಾರಿಗಳ ನಡುವೆ ಪೈಪೋಟಿ, ಹರಾಜು ಪ್ರಕ್ರಿಯೆ ಚಾಲ್ತಿಗೆ ಬಂದಿದೆ. ವರ್ಗಾವಣೆ ಎಂದಾಕ್ಷಣ ಅದು ಮತ್ತೆ ಅಧಿಕಾರಸ್ಥರಿಗೆ ಅನುಕೂಲವಾಗುತ್ತದೆ. ಈ ಅನುಕೂಲ ಪಡೆದ ಅಧಿಕಾರಸ್ಥರು ಅಧಿಕಾರಿಗಳ ಕುರಿತು ನಿಷ್ಠುರವಾಗಿರಲು ಸಾಧ್ಯವೇ? ಕಪ್ಪ ಕೊಟ್ಟು ಕುರ್ಚಿ ಹಿಡಿದ ಅಧಿಕಾರಿ ಪ್ರಾಮಾಣಿಕತೆ, ದಕ್ಷತೆಯಿಂದ ಕೆಲಸ ಮಾಡಲು ಸಾಧ್ಯವೇ?

ಇದಕ್ಕೆ ಕಡಿವಾಣ ಹಾಕುವುದು ಕಷ್ಟದ ಕೆಲಸವೇನಲ್ಲ. ಗೃಹ ಖಾತೆಯನ್ನು ನಿರ್ವಹಿಸುವವರು ದಕ್ಷತೆ ರೂಢಿಸಿಕೊಂಡರೆ ಕಷ್ಟವೇನಲ್ಲ. ಸಿದ್ದರಾಮಯ್ಯನವರ ಸಂಪುಟದಲ್ಲಿ ಗೃಹ ಖಾತೆ ಸಚಿವರಾದ ಡಾ. ಜಿ. ಪರಮೇಶ್ವರ್ ಆ ಸ್ಥಾನಕ್ಕೆ ಬೇಕಾದ ಗತ್ತುಗಾರಿಕೆಯನ್ನು ಮೈಗೂಡಿಸಿಕೊಂಡವರಲ್ಲ. ಯಾರನ್ನೂ ನೇರವಾಗಿ ಎದುರಿಸಿದವರಲ್ಲ, ಯಾರಿಗೂ ನೋವುಂಟು ಮಾಡುವವರಲ್ಲ. ಆ ಕಾರಣಕ್ಕಾಗಿಯೇ ಇದ್ದೂ ಇಲ್ಲದಂತಿರುವ, ಹಾಗಿರುವುದೇ ಸರಿ ಎಂದುಕೊಂಡಿರುವ ಪರಮೇಶ್ವರ್ ನಿಷ್ಠುರ ನಿಲುವು ತಾಳುವುದರಲ್ಲಿ ಸೋತಿದ್ದಾರೆ. ಗೃಹ ಖಾತೆ ವಹಿಸಿಕೊಂಡ ದಿನದಿಂದ ಇಲ್ಲಿಯವರೆಗೆ, ತಮ್ಮ ಹೇಳಿಕೆಗಳನ್ನು ತಾವೇ ನುಂಗಿಕೊಂಡು ಅಪಹಾಸ್ಯಕ್ಕೆ ಗುರಿಯಾಗಿದ್ದಾರೆ. ಸರ್ಕಾರಕ್ಕೂ ಕೆಟ್ಟ ಹೆಸರು ತರುತ್ತಿದ್ದಾರೆ.

ಭಾರತೀಯ ಸಾಮಾಜಿಕ ವ್ಯವಸ್ಥೆಯಲ್ಲಿ ದಲಿತರು ಅಥವಾ ಮುಸ್ಲಿಮರು ಗೃಹಸಚಿವರಾಗುವುದು, ಇತರರಿಗೆ ಮಾದರಿಯಾಗುವಂತೆ ನಿರ್ವಹಿಸುವುದು, ದುರಿತ ಕಾಲದಲ್ಲಿ ಬಹಳ ಮುಖ್ಯವಾಗುತ್ತದೆ. ಅಂತಹ ಅಪೂರ್ವ ಅವಕಾಶ ಪರಮೇಶ್ವರ್ ಅವರಿಗೆ ಸಿಕ್ಕಿತ್ತು. ಸಿಕ್ಕ ಅವಕಾಶವನ್ನು ಬಾಚಿ ತಬ್ಬಿಕೊಂಡಿದ್ದರೆ, ತಮ್ಮ ಜೀವಿತದುದ್ದಕ್ಕೂ ಪೊರೆದ ಪಕ್ಷ ಮತ್ತು ನಾಡಿಗೆ 75ರ ಅಂಚಿನಲ್ಲಿ ಕೊಂಚ ಪ್ರಾಮಾಣಿಕವಾಗಿ, ನಿಷ್ಠುರವಾಗಿ ಅಧಿಕಾರ ನಿರ್ವಹಿಸಿದ್ದರೆ, ಮಾದರಿಯಾಗುತ್ತಿದ್ದರು.

ಆದರೆ, ಅವರ ಅಂದರಿಕು ಮಂಚಿವಾಳ್ಳು ವ್ಯಕ್ತಿತ್ವವೇ ಅವರಿಗೆ ತೊಡಕಾಗಿದೆ. ಪ್ರತಿಯೊಂದು ಘಟನೆಗೂ ನನಗೆ ಮಾಹಿತಿ ಇಲ್ಲ ಎನ್ನುವುದು ಗೃಹ ಸಚಿವ ಸ್ಥಾನಕ್ಕೆ ಶೋಭೆ ತರದಾಗಿದೆ. ಈ ಮಟ್ಟಿಗಿನ ನಿಷ್ಕ್ರಿಯತೆಯೇ ಪೊಲೀಸ್ ಇಲಾಖೆ ಇಷ್ಟೊಂದು ಅಧ್ವಾನವೇಳಲು ಕಾರಣ ಎನ್ನುವುದನ್ನು ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮಾತುಗಳೇ ಹೇಳುತ್ತಿವೆ.

ಕಾಂಗ್ರೆಸ್ ಸರ್ಕಾರಕ್ಕೆ ಈ ಕಳಂಕದಿಂದ ಕಳಚಿಕೊಳ್ಳುವ ಇಚ್ಛೆ ಇದ್ದರೆ, ಈಗಲಾದರೂ ಪೊಲೀಸ್ ಇಲಾಖೆಯನ್ನು ಭ್ರಷ್ಟಾಚಾರಮುಕ್ತ ಇಲಾಖೆಯನ್ನಾಗಿಸಬೇಕು. ಅದಕ್ಕಿಂತ ಮೊದಲು ಜನಸ್ನೇಹಿ ಇಲಾಖೆಯನ್ನಾಗಿ ಮಾಡಬೇಕು. ಸಾಮಾನ್ಯರು ಕೂಡ ಸಲೀಸಾಗಿ ಠಾಣೆಗಳಿಗೆ ಹೋಗಿ ಬರುವಂತಹ ವಾತಾವರಣ ಸೃಷ್ಟಿಸಬೇಕು. ಇದು ಬೆಳೆದ, ಬೆಳೆಸಿದ ನಾಡಿಗೆ ಋಣ ತೀರಿಸುವ ಕೆಲಸ ಎನಿಸಬೇಕು.

ಕೊಟ್ಟಾಯಂನಲ್ಲಿ ಕಾರು ಅಪಘಾತ: ಸುರತ್ಕಲ್ ಕಾನದ ಯುವಕ ಮೃತ್ಯು, ನಾಲ್ವರಿಗೆ ಗಾಯ

ಸುರತ್ಕಲ್: ಕೇರಳದ ಕೊಟ್ಟಾಯಂನಲ್ಲಿ ಕಾರೊಂದು ಅಪಘಾತಕ್ಕೀಡಾಗಿ ಸುರತ್ಕಲ್ ಕಾನ ನಿವಾಸಿ ಯುವಕನೋರ್ವ ಮೃತಪಟ್ಟು, ನಾಲ್ವರು ಗಾಯಗೊಂಡ ಘಟನೆ ಬುಧವಾರ ಬೆಳಗ್ಗೆ ನಡೆದಿರುವುದು ವರದಿಯಾಗಿದೆ.

ಮೂಲತಃ ಮುಲ್ಕಿ ತಾಲೂಕಿನ ಅಂಗರಗುಡ್ಡೆ ನಿವಾಸಿ, ಪ್ರಸಕ್ತ ಕಾನದ ಚಿರಾಗ್ ಫ್ಲ್ಯಾಟ್ ನಲ್ಲಿ ವಾಸವಿದ್ದ ಶಾನವಾಝ್ ಯಾನೆ ಶಮೀಮ್(32) ಮೃತಪಟ್ಟವರು.

ಇವರ ಜೊತೆ ಕಾರಿನಲ್ಲಿದ್ದ ಕಾಟಿಪಳ್ಳದ ಸಿರಾಜ್, ಕಾನ ನಿವಾಸಿ ಅಶ್ಫಾಕ್, ಸೂರಿಂಜೆ ನಿವಾಸಿ ಶಬೀರ್ ಹಾಗೂ ರಾಜಸ್ಥಾನ ಮೂಲದ ವ್ಯಕ್ತಿಯೊಬ್ಬರು ಗಾಯಗೊಂಡಿದ್ದಾರೆ. ಗಾಯಾಳುಗಳ ಪೈಕಿ ಸಿರಾಜ್ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ.

ಶಮೀಮ್ ಸೇರಿದಂತೆ ಐವರು ಕೇರಳದ ಕೊಟ್ಟಾಯಂನಲ್ಲಿ ನಡೆಯುತ್ತಿದ್ದ ಕಾರ್ಯಕ್ರಮವೊಂದಕ್ಕೆ ಬೌನ್ಸರ್ ಗಳಾಗಿ ತೆರಳಿದ್ದರು ಎನ್ನಲಾಗಿದೆ. ಅಲ್ಲಿ ಇಂದು ಬೆಳಗ್ಗೆ ಉಪಹಾರ ಸೇವಿಸಲೆಂದು ಕಾರಿನಲ್ಲಿ ಪೇಟೆ ಕಡೆಗೆ ತೆರಳುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದೆ. ಇಕ್ಕಟ್ಟಾದ ರಸ್ತೆಯಲ್ಲಿ ನಿಯಂತ್ರಣ ಕಳೆದುಕೊಂಡ ಕಾರು ಸುಮಾರು 20 ಅಡಿ ಆಳಕ್ಕೆ ಉರುಳಿಬಿದ್ದಿದೆ ಎನ್ನಲಾಗಿದೆ.

ಈ ವೇಳೆ ಗಂಭೀರವಾಗಿ ಗಾಯಗೊಂಡಿದ್ದ ಶಾನವಾಝ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಸಿರಾಜ್ ರಿಗೆ ಗಂಭೀರ ಗಾಯಗಳಾಗಿದ್ದು, ಅವರನ್ನು ಮಂಗಳೂರಿಗೆ ಕರೆತಂದು ತೇಜಸ್ವಿನಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಅಜಿತ್ ಪವಾರ ಮೋದಿ ಸರ್ಕಾರದ ಒತ್ತಡಕ್ಕೆ ಮಣಿದು ಎನ್‌ಸಿಪಿ ಇಬ್ಭಾಗಿಸಿದ್ದ 'ಮಹಾ' ನಾಯಕ



ಬುಧವಾರ (ಜ.28) ಮುಂಜಾನೆಯೇ ದುರದೃಷ್ಟಕರ ದುರ್ಘಟನೆಯೊಂದು ಸಂಭವಿಸಿದೆ. ಮಹಾರಾಷ್ಟ್ರದ ಬಾರಾಮತಿಯಲ್ಲಿ ಸಂಭವಿಸಿದ ವಿಮಾನ ಅಪಘಾತದಲ್ಲಿ ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಸಾವನ್ನಪ್ಪಿದ್ದಾರೆ. ಅವರ ಖಾಸಗಿ ಜೆಟ್ ವಿಮಾನವು ಲ್ಯಾಂಡಿಂಗ್ ಸಮಯದಲ್ಲಿ ತಾಂತ್ರಿಕ ದೋಷಗಳನ್ನು ಎದುರಿಸಿದ್ದು, ರನ್‌ವೇಯಿಂದ ಹೊರಗುಳಿದು ಸ್ಫೋಟಗೊಂಡಿದೆ. ಅಜಿತ್ ಪವಾರ್, ಅವರ ಪೈಲಟ್ ಸೇರಿದಂತೆ ಆರು ಮಂದಿ ಕೊನೆಯುಸಿರೆಳೆದಿದ್ದಾರೆ.

ಶರದ್ ಪವಾರ್ ಅವರ ನೇತೃತ್ವದ ಎನ್‌ಸಿಪಿಯನ್ನು ಇಬ್ಭಾಗಿಸಿ, ತಮ್ಮದೇ ಬಣದೊಂದಿಗೆ ಬಿಜೆಪಿ ಜೊತೆಗೂಡಿ ಮಹಾಯುತಿ ಮೈತ್ರಿಕೂಟ ರಚಿಸಿದ್ದ ಅಜಿತ್ ಪವಾರ್ ಅವರು ಹಿಂದಿನ ಏಕನಾಥ್ ಶಿಂಧೆ ನೇತೃತ್ವದ ಸರ್ಕಾರ ಮತ್ತು ಹಾಲಿ ದೇವೇಂದ್ರ ಫಡ್ನವೀಸ್ ನೇತೃತ್ವದ ಸರ್ಕಾರದಲ್ಲಿ ಉಪಮುಖ್ಯಮಂತ್ರಿಯಾಗಿದ್ದರು. ಕೆಲವು ಹಗರಣಗಳ ಆರೋಪ ಹೊತ್ತಿದ್ದ ಅಜಿತ್, ಅಧಿಕಾರದ ಲಾಲಸೆ ಜೊತೆಗೆ, ಮೋದಿ ಸರ್ಕಾರದ ಇಡಿ, ಸಿಬಿಐ ದಾಳಿಗಳ ಬೆದರಿಕೆಗೆ ಒಳಗಾಗಿ ಎನ್‌ಸಿಪಿಯನ್ನು ಒಡೆದಿದ್ದರು ಮತ್ತು ಬಿಜೆಪಿ ಜೊತೆ ಸೇರಿದ್ದರು ಎಂಬ ವಿಚಾರಗಳು ಮೂರ್ನಾಲ್ಕು ವರ್ಷಗಳಿಂದ ಚರ್ಚೆಯಲ್ಲಿವೆ.

ಅಂದಹಾಗೆ, ಅಜಿತ್ ಪವಾರ್ ಅವರು ಪೂರ್ಣ ಹೆಸರು ಅಜಿತ್ ಅನಂತರಾವ್ ಪವಾರ್. ಮಾಜಿ ಮುಖ್ಯಮಂತ್ರಿ, ಪ್ರಭಾವಿ ನಾಯಕ, ಎನ್‌ಸಿಪಿ ಅಧ್ಯಕ್ಷ ಶರದ್ ಪವಾರ್ ಅವರ ಅಣ್ಣ ಅನಂತರಾವ್ ಪವಾರ್ ಅವರ ಮಗ. ಶರದ್ ಪವಾರ್ ನಾಯಕತ್ವದಲ್ಲಿ ಎನ್‌ಸಿಪಿಯಲ್ಲಿ ಬೆಳೆದ ಅಜಿತ್, ಮಹಾರಾಷ್ಟ್ರದ ಪ್ರಭಾವಿ ರಾಜಕೀಯ ನಾಯಕನಾಗಿ ವ್ಯಾಸ್ನೆಲೆಗೆ ಬಂದವರು. ಅವರು ಜನಿಸಿದ್ದು, ಅಹಮದ್ನಗರ ಜಿಲ್ಲೆಯ ದೇವ್ಳಾಳಿ ಪ್ರವರದಲ್ಲಿ, 1957ರ ಜುಲೈ 22ರಂದು. ಅವರ ತಾಯಿ ಆಶಾತಾಯಿ ಪವಾರ್.



1982ರಲ್ಲಿ ಸಹಕಾರಿ ಸಕ್ಕರೆ ಕಾರ್ಖಾನೆ ಮಂಡಳಿಗೆ ಸದಸ್ಯರಾಗಿ ಆಯ್ಕೆಯಾಗುವ ಮೂಲಕ ಅಜಿತ್ ರಾಜಕೀಯ ಆರಂಭಿಸಿದರು. 1991ರ ಚುನಾವಣೆಯಲ್ಲಿ ಬಾರಾಮತಿ ಕ್ಷೇತ್ರದಲ್ಲಿ ಎನ್‌ಸಿಪಿಯಿಂದ ಸ್ಪರ್ಧಿಸಿ, ಗೆದ್ದು ಮೊದಲ ಬಾರಿಗೆ ಲೋಕಸಭೆಗೆ ಪ್ರವೇಶಿಸಿದರು. ಆದರೆ, ಅಂದಿನ ಪಿ.ವಿ ನರಸಿಂಹ ರಾವ್ ನೇತೃತ್ವದ ಕೇಂದ್ರ ಸರ್ಕಾರದಲ್ಲಿ ಶರದ್ ಪವಾರ್ ಅವರು ರಕ್ಷಣಾ ಸಚಿವ ಸ್ಥಾನ ಪಡೆಯಲು ದಾರಿ ಮಾಡಿಕೊಡುವ ಉದ್ದೇಶದಿಂದ, ಅದೇ ವರ್ಷ ಸಂಸದ ಸ್ಥಾನಕ್ಕೆ ಅಜಿತ್ ರಾಜೀನಾಮೆಯನ್ನೂ ನೀಡಿದರು. ಬಳಿಕ, ಅವರು ಮಹಾರಾಷ್ಟ್ರ ರಾಜ್ಯ ರಾಜಕಾರಣದಲ್ಲಿ ತೊಡಗಿಸಿದರು.

ಅಜಿತ್ ಅವರು 1991ರಿಂದ ಈವರೆಗೆ ಸುಮಾರು 8 ಬಾರಿ ಬಾರಾಮತಿ ವಿಧಾನಸಭಾ ಕ್ಷೇತ್ರದಿಂದ ವಿಧಾನಸಭೆಗೆ ಆಯ್ಕೆಯಾಗಿದ್ದಾರೆ. ಈ ಅವಧಿಯಲ್ಲಿ 5-6 ಬಾರಿ ಉಪಮುಖ್ಯಮಂತ್ರಿ ಹುದ್ದೆಯನ್ನೂ ಗಿಟ್ಟಿಸಿಕೊಂಡಿದ್ದಾರೆ. ಜೊತೆಗೆ, ಹಣಕಾಸು, ಕೃಷಿ, ವಿದ್ಯುತ್, ಯೋಜನೆ, ಮಣ್ಣು ಸಂರಕ್ಷಣೆ, ಸಣ್ಣ ನೀರಾವರಿ, ಜಲಸಂಪನ್ಮೂಲ, ಊರ್ಜಾ ಮುಂತಾದ ಪ್ರಮುಖ ಇಲಾಖೆಗಳನ್ನು ನಿರ್ವಹಿಸಿದ್ದಾರೆ. ಜನತಾ ದರ್ಬಾರ್ ನಡೆಸುವ ಮೂಲಕ ಸಾಮಾನ್ಯರ ಸಮಸ್ಯೆಗಳನ್ನು ನೇರವಾಗಿ ಆಲಿಸಿ, ಪರಿಹರಿಸುತ್ತಿದ್ದರು ಎಂಬ ಖ್ಯಾತಿಯನ್ನೂ ಪಡೆದಿದ್ದಾರೆ.

ಕೃಷಿ ಮತ್ತು ಜಲಸಂಪನ್ಮೂಲ ಕ್ಷೇತ್ರದಲ್ಲಿ ಅವರ ಕೊಡುಗೆ ಅಪಾರವಾಗಿದೆ. ಅವರು ರೈತರ ಹಿತಕ್ಕಾಗಿ ನಾನಾ ಕ್ರಮಗಳನ್ನು ಕೈಗೊಂಡಿದ್ದರು. ರೈತರ ಕೃಷಿ ಪಂಪ್‌ಗಳಿಗೆ ಉಚಿತ ವಿದ್ಯುತ್ ಮತ್ತು ಸೌರ ಗ್ರಿಡ್ ಯೋಜನೆಗಳ ಅನುಷ್ಠಾನಗೊಳಿಸಿದ್ದರು. ಜಲಸಂಪನ್ಮೂಲ ಸಚಿವರಾಗಿ, ಕೆರೆಗಳಿಗೆ ನೀರು ತುಂಬಿಸುವ ಏತ ನೀರಾವರಿ ಯೋಜನೆಯನ್ನು ರೂಪಿಸಿದ್ದರು. ಜೊತೆಗೆ, ಹೊಸ ಬ್ಯಾರೇಜ್‌ಗಳ ನಿರ್ಮಾಣಕ್ಕೆ ಒತ್ತುಕೊಟ್ಟಿದ್ದರು.

ಹಣಕಾಸು ಖಾತೆಯನ್ನು ನಿಭಾಯಿಸಿದ್ದ ಅಜಿತ್, ಜಿಲ್ಲೆಗಳಿಗೆ ತ್ವರಿತ ನಿಧಿ ವಿತರಣೆಗೆ ಒತ್ತುಕೊಟ್ಟಿದ್ದರು. ರೈತರ ಕಲ್ಯಾಣ, ಕೃಷಿಗೆ ಹೆಚ್ಚಿನ ನಿಧಿ ಹಂಚಿಕೆ ಮಾಡಿದ್ದರು. ತೆರಿಗೆ ಸಂಗ್ರಹಣೆಯನ್ನು ಸುಧಾರಿಸಿದ್ದರು.

ಮಹಾರಾಷ್ಟ್ರ ರಾಜಕೀಯದಲ್ಲಿ ಅಜಿತ್ ಪವಾರ್ ಅವರ ಸಾಧನೆಗಳು ಎಷ್ಟಿವೆಯೋ, ಅದಕ್ಕಿಂತ ಮಿಗಿಲಾಗಿ ವಿವಾದಗಳೂ ಇವೆ. 2013ರಲ್ಲಿ ಜಲಸಂಪನ್ಮೂಲ ಸಚಿವರಾಗಿದ್ದ ಅಜಿತ್ ಪವಾರ್, ಕೆರೆಗಳಿಗೆ ನೀರು ತುಂಬಿಸಲು ಆಗ್ರಹಿಸಿ ರೈತರು ಪ್ರತಿಭಟನೆ ನಡೆಸುವಾಗ, ಮೂತ್ರ ಮಾಡಿ ನೀರು ತುಂಬಿಸಲಾ? ಎಂಬ ಹೇಳಿಕೆ ನೀಡಿ, ವಿವಾದಕ್ಕೆ ಸಿಲುಕಿದ್ದರು. ರೈತರ ಆಕ್ರೋಶಕ್ಕೆ ಗುರಿಯಾಗಿದ್ದರು. ಬಳಿಕ, ಕ್ಷಮೆಯಾಚಿಸಿದರು.

ಹಗರಣಗಳ ಸುಳಿಯಲ್ಲೂ ಸಿಲುಕಿದ್ದ ಅಜಿತ್ ಪವಾರ್, ನೀರಾವರಿಗೆ ಸಂಬಂಧಿತ ಹಗರಣದಲ್ಲಿ ಪ್ರಮುಖ ಆರೋಪಿಯಾಗಿದ್ದರು. 1999-2014ರ ನಡುವೆ ಜಲಸಂಪನ್ಮೂಲ ಸಚಿವರಾಗಿದ್ದ ಅಜಿತ್, ನೀರಾವರಿಗಾಗಿ ಸುಮಾರು 20,000 ಕೋಟಿ ರೂ.ಗಳಿಗೆ ಅಧಿಕ ಖರ್ಚು ಮಾಡಿದ್ದರೂ, ಅಭಿವೃದ್ಧಿ ಮಾತ್ರ 0.1% ಮಾತ್ರವೇ ಇದೆ. ಬೃಹತ್ ಹಗರಣ ನಡೆದಿದೆ ಎಂದು ಆರೋಪಿಸಲಾಗಿತ್ತು.

ನೀರಾವರಿ ಇಲಾಖೆಯ ಇಂಜಿನಿಯರ್ ಆಗಿದ್ದ ವಿಜಯ್ ಪಂಢರೆ ಅವರು ಅಜಿತ್ ವಿರುದ್ಧ ಗಂಭೀರ ಆರೋಪ ಮಾಡಿ, ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದರು. 2014ರಲ್ಲಿ ಅಧಿಕಾರಕ್ಕೆ ಬಂದ ದೇವೇಂದ್ರ ಫಡ್ನವೀಸ್ ನೇತೃತ್ವದ ಬಿಜೆಪಿ ಸರ್ಕಾರದಲ್ಲಿ ಈ ಹಗರಣದ ತನಿಖೆ ನಡೆಸಿತು. ಆದಾಗ್ಯೂ, ತನಿಖೆ ನಡೆಸಿದ, ಆ್ಯಂಟಿ ಕರಪ್ಷನ್ ಬ್ಯೂರೋ (ಎಸಿಬಿ) 2019ರಲ್ಲಿ ಅಜಿತ್‌ಗೆ ಕ್ಲೀನ್ ಚಿಟ್ ನೀಡಿತು. ಹಲವು ಪ್ರಕರಣಗಳನ್ನು ಮುಚ್ಚಿತು.

ಅಜಿತ್ ಅವರ ಪುತ್ರ ಪಾರ್ಥ್ ಪವಾರ್ ಅವರು ಪುಣೆಯಲ್ಲಿ ದಲಿತರಿಗೆ ಮೀಸಲಿದ್ದ ಮಹಾರ್ ಸ್ಮಶಾನ ಭೂಮಿಯನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿದ್ದಾರೆ. 1,800 ಕೋಟಿ ರೂ. ಮೌಲ್ಯದ ಭೂಮಿಯನ್ನು ಕೇವಲ 300 ಕೋಟಿ ರೂ.ಗಳಿಗೆ ಖರೀದಿಸಿದ್ದಾರೆ. ಸ್ಟ್ಯಾಂಪ್ ತೆರಿಗೆಯಲ್ಲಿ ಅಕ್ರಮ ಎಸಗಿದ್ದಾರೆ ಎಂದು ಆರೋಪಿಸಲಾಗಿದೆ. ಈ ಪ್ರಕರಣಕ್ಕೂ ತಮಗೂ ಸಂಬಂಧವಿಲ್ಲವೆಂದು ಅಜಿತ್ ಹೇಳಿಕೊಂಡಿದ್ದರು.

ಇನ್ನು, ಮಹಾರಾಷ್ಟ್ರ ಸಹಕಾರಿ ಬ್ಯಾಂಕ್‌ಗೆ ಸಂಬಂಧಿಸಿದ 25,000 ಕೋಟಿ ರೂ.ಗಳ ಬೃಹತ್ ಹಗರಣದಲ್ಲಿಯೂ ಅಜಿತ್ ಭಾಗಿಯಾಗಿದ್ದಾರೆ ಎಂದು ಆರೋಪಿಸಲಾಗಿದೆ. ಅಲ್ಲದೆ, ಲವಾಸ ಪ್ರಾಜೆಕ್ಟ್‌ಗೆ ಸಂಬಂಧಿಸಿದಂತೆ ಭೂಮಿ ವಿತರಣೆಯಲ್ಲಿ ಅಧಿಕಾರಿಗಳಿಗೆ ಒತ್ತಡ ಹೇರಿದ ಆರೋಪಗಳೂ ಅಜಿತ್ ವಿರುದ್ಧ ಕೇಳಿಬಂದಿದ್ದವು. ಜೊತೆಗೆ, ಅಕ್ರಮ ಮರಳು ಗಣಿಗಾರಿಕೆ, ಪಿಂಪ್ರಿ-ಚಿಂಚವಡ್ ನಗರಸಭೆಯಲ್ಲಿ ಭ್ರಷ್ಟಾಚಾರ ಆರೋಪಗಳಲ್ಲಿಯೂ ಅಜಿತ್ ಹೆಸರು ಕೇಳಿಬಂದಿತ್ತು. ಈ ಎಲ್ಲ ಆರೋಪಗಳನ್ನು ರಾಜಕೀಯ ಪ್ರೇರಿತವೆಂದು ಹೇಳಿದ್ದ ಅಜಿತ್ ಪವಾರ್, ಆರೋಪಗಳನ್ನು ತಳ್ಳಿ ಹಾಕಿದ್ದರು.

ಆದಾಗ್ಯೂ, ಇದೇ ಆರೋಪಗಳ ಆಧಾರದ ಮೇಲೆ ಅಜಿತ್ ವಿರುದ್ಧ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಇಡಿ, ಸಿಬಿಐ ದಾಳಿಯ ಬೆದರಿಕೆವೊಡ್ಡಿತ್ತು ಎಂದು ಹೇಳಲಾಗಿದೆ. ಕೇಂದ್ರ ತನಿಖಾ ಸಂಸ್ಥೆಗಳನ್ನು ಬಳಸುವ ಮೋದಿ ಸರ್ಕಾರದ ಬಲವಂತಕ್ಕೆ ಮಣಿದು ಅಜಿತ್ ಪವಾರ್, ಎನ್‌ಸಿಪಿಯನ್ನು ಇಬ್ಭಾಗ ಮಾಡಿದ್ದರು.

2023ರಲ್ಲಿ ಎನ್‌ಸಿಪಿಯ ಹಲವಾರು ಶಾಸಕರೊಂದಿಗೆ ಅಜಿತ್ ಪವಾರ್, ಬಿಜೆಪಿ-ಶಿವಸೇನಾ (ಶಿಂಧೆ ಬಣ) ನೇತೃತ್ವದ ಮಹಾಯುತಿ ಮೈತ್ರಿಕೂಟ ಸೇರಿದರು. ಮತ್ತೆ ಉಪಮುಖ್ಯಮಂತ್ರಿಯಾದರು. ಅವರ ನಡೆಯನ್ನು, ಶರದ್ ಪವಾರ್ ಮತ್ತು ಎಂವಿಎ ರಾಜಕೀಯ ದ್ರೋಹವೆಂದು ಬಣ್ಣಿಸಿದವರು. ಆದಾಗ್ಯೂ, ಅವರು ಬಿಜೆಪಿ ಮೈತ್ರಿಕೂಟ ಸೇರಿದ ಬೆನ್ನಲ್ಲೇ, ಅಜಿತ್ ವಿರುದ್ಧದ ಹಲವಾರು ಪ್ರಕರಣಗಳನ್ನು ಮುಚ್ಚಲಾಯಿತು. ಮೋದಿ ಸರ್ಕಾರದ ಕೃಪೆಯಿಂದಾಗಿ ಅಜಿತ್ ಪವಾರ್ ತಾವು ಕ್ಲೀನ್ ಹ್ಯಾಂಡ್ ಎಂದು ಹೇಳಿಕೊಳ್ಳಲು ಸಾಧ್ಯವಾಯಿತು.

ಹಾಲಿ ದೇವೇಂದ್ರ ಫಡ್ನವೀಸ್ ನೇತೃತ್ವದ ಮಹಾಯುತಿ ಸರ್ಕಾರದಲ್ಲಿ ಉಪಮುಖ್ಯಮಂತ್ರಿಯಾಗಿದ್ದ ಅಜಿತ್ ಪವಾರ್, ಬುಧವಾರ ದುರಂತ ಅಂತ್ಯ ಕಂಡಿದ್ದಾರೆ.

ಯುಜಿಸಿ ಹೊಸ ನಿಯಮ - 2026 : ಇಷ್ಟೊಂದು ವಿರೋಧ ಯಾಕೆ?

ಭಾರತೀಯ ಶಿಕ್ಷಣ ವ್ಯವಸ್ಥೆಯಲ್ಲಿ ಜಾತಿ ತಾರತಮ್ಯ ಎನ್ನುವುದು ಅನೇಕ ದಶಕಗಳಿಂದ ಬೇರೂರಿದೆ. ಜ.15ರಂದು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಜಾತಿ ತಾರತಮ್ಯವನ್ನು ಹೋಗಲಾಡಿಸಲು ವಿಶ್ವವಿದ್ಯಾಲಯ ಧನ ಸಹಾಯ ಆಯೋಗ (ಯುಜಿಸಿ) ಜಾರಿಗೆ ತಂದಿರುವ ''ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಸಮಾನತೆ ಉತ್ತೇಜಿಸುವ ನಿಯಮ -2026'' (2026) ವಿರುದ್ಧ ದೇಶದಾದ್ಯಂತ ಪ್ರತಿಭಟನೆಗಳು ಬುಗಿಲೆದ್ದಿದೆ.

ಉತ್ತರ ಪ್ರದೇಶದಲ್ಲಿ ಆರಂಭವಾದ ಪ್ರತಿಭಟನೆಯ ಕಾವು ದೇಶದ ಎಲ್ಲಾ ರಾಜ್ಯಗಳಿಗೂ ಹಬ್ಬಿದೆ. ಯುಜಿಸಿ ಜಾರಿಗೊಳಿಸಿರುವ ಹೊಸ ನಿಯಮವನ್ನು ಸಂಪೂರ್ಣವಾಗಿ ವಾಪಸು ಪಡೆಯಬೇಕು ಎಂದು ಆಗ್ರಹಿಸಿ ವಿದ್ಯಾರ್ಥಿ ಸಂಘಟನೆಗಳು ನವದೆಹಲಿಯಲ್ಲಿರುವ ಯುಜಿಸಿ ಪ್ರಧಾನ ಕಚೇರಿಯ ಎದುರು ಪ್ರತಿಭಟನೆ ನಡೆಸುತ್ತಿದ್ದಾರೆ.

2026ರ ಜನವರಿ 15 ರಂದು ಯುಜಿಸಿ ಅಧಿಕೃತವಾಗಿ ಹೊರಡಿಸಿದ ಅಧಿಸೂಚನೆಯಲ್ಲಿ ವಿಶ್ವವಿದ್ಯಾಲಯ ಕ್ಯಾಂಪಸ್‌ಗಳಲ್ಲಿ ಪರಿಶಿಷ್ಟ ಜಾತಿ(ಎಸ್‌ಸಿ), ಪರಿಶಿಷ್ಟ ಪಂಗಡ(ಎಸ್‌ಟಿ) ಮತ್ತು ಹಿಂದುಳಿದ ವರ್ಗಗಳ(ಒಬಿಸಿ) ವಿದ್ಯಾರ್ಥಿಗಳಿಗೆ ದೃಢವಾದ ರಕ್ಷಣೆಯನ್ನು ಒದಗಿಸುವ ಉದ್ದೇಶವನ್ನು ಹೊಂದಿದೆ ಎಂದು ಹೇಳಲಾಗಿದೆ.

ಆದರೆ, ಈ ಹೊಸ ನಿಯಮವು ಜಾತಿ ಆಧಾರಿತ ತಾರತಮ್ಯದ ಮೂಲಕ ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಅನ್ಯಾಯ ಮಾಡುತ್ತದೆ ಎಂದು ವ್ಯಾಖ್ಯಾನಿಸಲಾಗುತ್ತಿದೆ. ಈ ಕುರಿತು ಉತ್ತರ ಪ್ರದೇಶದ ಬನಾರಸ್ ಹಿಂದೂ ವಿಶ್ವವಿದ್ಯಾಲಯದ ಪೋಸ್ಟ್-ಡಾಕ್ಟರೇಟ್ ಸಂಶೋಧಕ ಮೃತ್ಯುಂಜಯ್ ತಿವಾರಿ ಎಂಬವರು ವಿಶ್ವವಿದ್ಯಾಲಯ ಧನ ಸಹಾಯ ಆಯೋಗ ತಂದಿರುವ ಯುಜಿಸಿ ಹೊಸ ನಿಯಮ- 2026 ಅನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ರಿಟ್ ಅರ್ಜಿಯನ್ನು ಸಲ್ಲಿಸಿದ್ದಾರೆ.

ಅದೇ ರೀತಿಯಲ್ಲಿ ಸುಪ್ರೀಂ ಕೋರ್ಟ್ ಮೊರೆ ಹೋಗಿರುವ ವಿನೀತ್ ಜಿಂದಾಲ್ ಎಂಬುವವರು ''ಯುಜಿಸಿ ಹೊಸ ನಿಯಮ 3 (ಸಿ) ಅನ್ವಯ, ಜಾತಿ ಆಧಾರಿತ ತಾರತಮ್ಯ ತಡೆಯಲು ಕಾಲೇಜು ಕ್ಯಾಂಪಸ್‌ಗಳಲ್ಲಿ, ವಿಶ್ವವಿದ್ಯಾಲಯ ಸಮಾನ ಅವಕಾಶ ಕೇಂದ್ರಗಳು, ಸಮಾನತೆ ಸಮಿತಿ, ಓಂಬುಡ್ಸ್ ಮನ್, ಸಹಾಯವಾಣಿ ಸ್ಥಾಪಿಸುವುದರ ಬಗ್ಗೆ ಪ್ರಸ್ತಾಪಿಸಲಾಗಿದೆ. ಆದರೆ, ಈ ಸೌಲಭ್ಯದ ವ್ಯಾಪ್ತಿಯನ್ನು ಎಸ್‌ಸಿ, ಎಸ್‌ಟಿ ಮತ್ತು ಇತರ ಹಿಂದುಳಿದ ವರ್ಗಗಳಿಗೆ ಮಾತ್ರ ಸೀಮಿತಗೊಳಿಸಲಾಗಿದೆ. ಈ ನಿಯಮವು ಮೀಸಲಾತಿ ವರ್ಗದಡಿ ಸೇರದ ವಿದ್ಯಾರ್ಥಿಗಳು ಮತ್ತು ಉಪನ್ಯಾಸಕರನ್ನು ರಕ್ಷಿಸುವಲ್ಲಿ ವಿಫಲವಾಗಿದೆ'' ಎಂದು ಅಭಿಪ್ರಾಯಪಟ್ಟಿದ್ದಾರೆ.

ಮುಂದುವರೆದು, ''ಮೀಸಲಾತಿ ವರ್ಗದಡಿ ಸೇರದವರು ತಮ್ಮ ಜಾತಿ ಹೆಸರಿನಲ್ಲಿ ಕಿರುಕುಳ ಅಥವಾ ತಾರತಮ್ಯ ಎದುರಿಸುವ ಸಾಧ್ಯತೆ ಇರುತ್ತದೆ. ಈ ನಿಯಮ ಅಸಾಂವಿಧಾನಿಕ ಮತ್ತು ಸಂವಿಧಾನದ 14ನೇ ವಿಧಿ (ಸಮಾನತೆ ಹಕ್ಕು) 15ನೇ ವಿಧಿ (ಜಾತಿ ಆಧಾರಿತ ತಾರತಮ್ಯ ನಿಷೇಧ) ಮತ್ತು 21ನೇ ವಿಧಿಯನ್ನು (ಜೀವಿಸುವ ಹಕ್ಕು) ಉಲ್ಲಂಘಿಸುತ್ತದೆ'' ಎನ್ನುವುದನ್ನು ಕೋರ್ಟ್ ಗಮನಕ್ಕೆ ತರಲಾಗಿದೆ ಎಂದು ತಿಳಿಸಿದ್ದಾರೆ.

ಇದು ಕೇವಲ ವಿದ್ಯಾರ್ಥಿ ಪ್ರತಿಭಟನೆಯಾಗದೆ ರಾಜಕೀಯವಾಗಿಯೂ ತಿರುವು ಪಡೆದುಕೊಳ್ಳುತ್ತಿದೆ. ರಾಜ್ಯಸಭಾ ಸಂಸದೆ ಪ್ರಿಯಾಂಕಾ ಚತುರ್ವೇದಿ ಸಾಮಾಜಿಕ ಮಾಧ್ಯಮಗಳಲ್ಲಿ ಈ ಕುರಿತು ಪೋಸ್ಟ್ ಮಾಡಿ, ನಿಯಮಗಳನ್ನು ವಾಪಸ್ ಪಡೆಯಬೇಕು ಅಥವಾ ಅಗತ್ಯವಿದ್ದಲ್ಲಿ ತಿದ್ದುಪಡಿ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಕಾನೂನು ಎಲ್ಲರಿಗೂ ಸಮಾನ ರಕ್ಷಣೆಯನ್ನು ನೀಡಬೇಕು ಮತ್ತು ಸರ್ವರನ್ನೂ ಒಳಗೊಳ್ಳಬೇಕು. ಹೀಗಿರುವಾಗ, ಈ ಕಾನೂನುಗಳನ್ನು ಅನುಷ್ಠಾನ ಮಾಡುವಾಗ ಯಾಕೆ ತಾರತಮ್ಯ ಮಾಡಲಾಗಿದೆ? ಸುಳ್ಳು ಆರೋಪ ಮಾಡಿದರೆ ಏನಾಗಬಹುದು? ತಪ್ಪನ್ನು ನಿರ್ಧರಿಸುವುದು ಹೇಗೆ? ಪದಗಳು, ಕ್ರಿಯೆಗಳು ಅಥವಾ ಗ್ರಹಿಕೆಗಳ ಮೂಲಕ ತಾರತಮ್ಯವನ್ನು ವ್ಯಾಖ್ಯಾನಿಸುವುದು ಹೇಗೆ? ಎಂದು ಪ್ರಶ್ನಿಸಿದ್ದಾರೆ.

ಏನಿದು ಯುಜಿಸಿ ಮಸೂದೆ 2026?

ಇದು ಸಂಸತ್ತಿನಲ್ಲಿ ಅಂಗೀಕಾರವಾದ ಮಸೂದೆಯಲ್ಲದಿದ್ದರೂ, ಯುಜಿಸಿ ಕಾಯ್ದೆಯಡಿ ರೂಪಿಸಲಾದ ಬಲವಾದ ನಿಯಮಾವಳಿಗಳಾಗಿವೆ. ರೋಹಿತ್ ವೇಮುಲ ಮತ್ತು ಪಾಯಲ್ ತದ್ವಿ ಅವರಂತಹ ಪ್ರತಿಭಾವಂತ ವಿದ್ಯಾರ್ಥಿಗಳ ಆತ್ಮಹತ್ಯೆ ಪ್ರಕರಣಗಳು ದೇಶಾದ್ಯಂತ ತಲ್ಲಣ ಮೂಡಿಸಿದ್ದವು. ಅಂತಹ ದುರಂತಗಳು ಮರುಕಳಿಸದಂತೆ ತಡೆಯಲು ಮತ್ತು ಶೈಕ್ಷಣಿಕ ಸಂಸ್ಥೆಗಳಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಗೂ, ಅವರ ಜಾತಿ ಅಥವಾ ಹಿನ್ನೆಲೆಯನ್ನು ಲೆಕ್ಕಿಸದೆ, ಸಮಾನ ಅವಕಾಶ ಮತ್ತು ಗೌರವಯುತ ವಾತಾವರಣವನ್ನು ಕಲ್ಪಿಸುವುದು ಇದರ ಮುಖ್ಯ ಉದ್ದೇಶವಾಗಿದೆ.

2012ರ ಯುಜಿಸಿ ನಿಯಮಗಳ ಅನುಷ್ಠಾನವನ್ನು ಪ್ರಶ್ನಿಸಿ ರೋಹಿತ್ ವೇಮುಲಾ ಮತ್ತು ಪಾಯಲ್ ತಡ್ವಿ ಅವರ ತಾಯಂದಿರು ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯನ್ನು ಆಲಿಸಿದ್ದ ಸುಪ್ರೀಂ ಕೋರ್ಟ್ ಹೊಸ ನಿಯಮಗಳನ್ನು ಜಾರಿಗೊಳಿಸುವಂತೆ ಯುಜಿಸಿಗೆ ಸೂಚಿಸಿತ್ತು. ಸುಪ್ರೀಂ ಸೂಚನೆಯಂತೆ ಕಳೆದ ವರ್ಷ ಫೆಬ್ರವರಿಯಲ್ಲಿ ಈ ನಿಯಮಗಳ ಕರಡನ್ನು ಬಿಡುಗಡೆ ಮಾಡಲಾಗಿತ್ತು.

ಹೊಸ ನಿಯಮಗಳ ಪ್ರಮುಖ ಅಂಶಗಳು

ಒಬಿಸಿ ವರ್ಗದ ಸೇರ್ಪಡೆ: ಇಲ್ಲಿಯವರೆಗೆ, ಜಾತಿ ತಾರತಮ್ಯದ ದೂರುಗಳನ್ನು ಪರಿಹರಿಸುವ ವ್ಯವಸ್ಥೆಯು ಕೇವಲ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಸೀಮಿತವಾಗಿತ್ತು. ಆದರೆ ಹೊಸ ನಿಯಮಗಳ ಅಡಿಯಲ್ಲಿ, ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಯನ್ನು ಕೂಡ ತಾರತಮ್ಯದ ವಿರುದ್ಧದ ರಕ್ಷಣಾ ವ್ಯಾಪ್ತಿಗೆ ತರಲಾಗಿದೆ. ಜೊತೆಗೆ ಅಂಗವಿಕಲರು ಮತ್ತು ಮಹಿಳೆಯರಿಗೂ ಈ ರಕ್ಷಣೆ ಅನ್ವಯಿಸುತ್ತದೆ.

ಸಮಾನ ಅವಕಾಶ ಕೋಶ (ಇಒಸಿ): ಪ್ರತಿಯೊಂದು ಉನ್ನತ ಶಿಕ್ಷಣ ಸಂಸ್ಥೆಯು ಕಡ್ಡಾಯವಾಗಿ ಸಮಾನ ಅವಕಾಶ ಕೋಶವನ್ನು ಸ್ಥಾಪಿಸಬೇಕು. ಇದು ಕೇವಲ ಹೆಸರಿಗೆ ಮಾತ್ರವಲ್ಲದೆ, ಎಸ್‌ಸಿ, ಎಸ್‌ಟಿ ಮತ್ತು ಒಬಿಸಿ ಸಮುದಾಯಗಳಿಗೆ ಶೈಕ್ಷಣಿಕ ಮತ್ತು ಆರ್ಥಿಕ ಬೆಂಬಲ ನೀಡುವ ಜವಾಬ್ದಾರಿಯನ್ನು ಹೊಂದಿರುತ್ತದೆ.

ಸಮಾನತೆ ಸಮಿತಿ ರಚನೆ: ಪ್ರತಿ ಕಾಲೇಜು ಅಥವಾ ವಿಶ್ವವಿದ್ಯಾಲಯದಲ್ಲಿ ಕುಲಪತಿ ಅಥವಾ ಪ್ರಾಂಶುಪಾಲರ ನೇತೃತ್ವದಲ್ಲಿ ಸಮಾನತೆ ಸಮಿತಿಯನ್ನು ರಚಿಸಬೇಕು. ಗಮನಾರ್ಹ ವಿಷಯವೇನೆಂದರೆ, ಈ ಸಮಿತಿಯಲ್ಲಿ ಎಸ್‌ಸಿ, ಎಸ್‌ಟಿ, ಒಬಿಸಿ, ಮಹಿಳೆಯರು ಮತ್ತು ಅಂಗವಿಕಲ ವರ್ಗಗಳ ಪ್ರತಿನಿಧಿಗಳು ಕಡ್ಡಾಯವಾಗಿ ಇರಬೇಕು. ಈ ಸಮಿತಿಯು ಪ್ರತಿ ಆರು ತಿಂಗಳಿಗೊಮ್ಮೆ ಯುಜಿಸಿಗೆ ವರದಿ ಸಲ್ಲಿಸಬೇಕು.

ದೂರು ಪರಿಹಾರಕ್ಕೆ ದಿನ ನಿಗದಿ: ಯಾವುದೇ ವಿದ್ಯಾರ್ಥಿಯು ತಾರತಮ್ಯದ ದೂರು ನೀಡಿದರೆ, ಅದನ್ನು ವಿಶ್ವವಿದ್ಯಾಲಯ ನಿರ್ಲಕ್ಷಿಸುವಂತಿಲ್ಲ. ದೂರು ಬಂದ 24 ಗಂಟೆಗಳ ಒಳಗೆ ಸಮಾನತೆ ಸಮಿತಿಯು ಪ್ರಾಥಮಿಕ ಕ್ರಮ ಕೈಗೊಳ್ಳಬೇಕು. 15 ಕೆಲಸದ ದಿನಗಳ ಒಳಗೆ ಪೂರ್ಣ ತನಿಖೆ ನಡೆಸಿ ವರದಿ ಸಲ್ಲಿಸಬೇಕು. ಇದು ಸಂತ್ರಸ್ತರಿಗೆ ತ್ವರಿತ ನ್ಯಾಯ ಸಿಗುವಂತೆ ಮಾಡುತ್ತದೆ.

ಸಂಸ್ಥೆಯ ಮುಖ್ಯಸ್ಥರೇ ನೇರ ಹೊಣೆ: ಕ್ಯಾಂಪಸ್‌ನಲ್ಲಿ ಯಾವುದೇ ತಾರತಮ್ಯ ನಡೆದರೆ, ಅದಕ್ಕೆ ಇಲಾಖೆಯ ಮುಖ್ಯಸ್ಥರು ಅಥವಾ ವಾರ್ಡನ್‌ಗಳ ಮೇಲೆ ಗೂಬೆ ಕೂರಿಸುವಂತಿಲ್ಲ. ಹೊಸ ನಿಯಮದ ಪ್ರಕಾರ, ಕಾಲೇಜಿನ ಪ್ರಾಂಶುಪಾಲರು ಅಥವಾ ವಿವಿ ಕುಲಪತಿಗಳೇ ಇದಕ್ಕೆ ನೇರ ಹೊಣೆಗಾರರಾಗಿರುತ್ತಾರೆ. ತಪ್ಪಿತಸ್ಥ ಸಂಸ್ಥೆಗಳ ಮಾನ್ಯತೆಯನ್ನು ರದ್ದುಗೊಳಿಸುವ ಅಧಿಕಾರವನ್ನೂ ಯುಜಿಸಿ ಹೊಂದಿದೆ.

24/7 ಸಹಾಯವಾಣಿ ಮತ್ತು ಆನ್‌ಲೈನ್ ಪೋರ್ಟಲ್: ವಿದ್ಯಾರ್ಥಿಗಳು ಭಯವಿಲ್ಲದೆ ದೂರು ನೀಡಲು ದಿನದ 24 ಗಂಟೆಯೂ ಕಾರ್ಯನಿರ್ವಹಿಸುವ ಹೆಲ್ಪ್‌ಲೈನ್ ಮತ್ತು ಆನ್‌ಲೈನ್ ದೂರು ವ್ಯವಸ್ಥೆಯನ್ನು ಕಲ್ಪಿಸಬೇಕು.

ಬಿಜೆಪಿಗೆ ತಿರುಗುಬಾಣವಾದ ಯುಜಿಸಿ ನಿಯಮ?

ಕರ್ಣಿ ಸೇನಾ ಸೇರಿದಂತೆ ಅನೇಕ ಮೇಲ್ಜಾತಿಯ ಸಂಘಟನೆಗಳು ಮೋದಿ ಅವರ ವಿರುದ್ಧ ಬೀದಿಗಿಳಿದಿದ್ದಾರೆ. ಕಟ್ಟಾ ಹಿಂದುತ್ವ ವಾದಿಗಳು ಎಂದು ಹೇಳಿಕೊಳ್ಳುವ ಜನರೇ ಕೇಂದ್ರ ಸರ್ಕಾರ ಯುಜಿಸಿ ಮೂಲಕ ತರಲಿರುವ ಹೊಸ ನಿಯಮ -2026ಕ್ಕೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR